ಸಂಪುಟ : 10 ಸಂಚಿಕೆ: 90 ಪುಟ : 4+2 ಬೆಲೆ: 3.00 ಶುಕ್ರವಾರ ಮೇ 09 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 90 Pages : 4+2 Price : 3.00 Friday May 09 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಉಗ್ರರ ಅಡಗುತಾಣ ನಾಶ ಮಾಡಿದ ಭಾರತೀಯ ಸೈನಿಕರಿಗೆ ಅಭಿನಂದನೆ ಸಲ್ಲಿಸಿದ ಸಚಿವ ಎಚ್.ಕೆ. ಪಾಟೀಲ

# ದೇಶದ ಹಿರಿಮೆಯನ್ನು ಹೆಚ್ಚಿಸಿದ 'ಆಪರೇಷನ್ ಸಿಂಧೂರ'



■ ವಿಜಯಸಾಕ್ಷಿ ಸುದ್ದಿ, ಗದಗ

ಕೆಲ ದಿನಗಳ ಹಿಂದೆ ದೇಶದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕರ ಹೀನ ಕೃತ್ಯಕ್ಕೆ ಪ್ರತ್ಯುತ್ತರವಾಗಿ ಪಾಕಿಸ್ತಾನದ ನಾಗರಿಕರಿಗೆ ತೊಂದರೆಯಾಗದಂತೆ ಉಗ್ರರ ಅಡಗುತಾಣಗಳನ್ನು ಪತ್ತೆ ಮಾಡಿ ಧ್ವಂಸ ಮಾಡಲಾಗಿದೆ. ಈ ಸಾಧನೆ ನಮ್ಮ ದೇಶದ ಗರ್ವವನ್ನು ಹೆಚ್ಚಿಸಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೆಮ್ಮೆಯಿಂದ ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗುರುವಾರ 'ಆಪರೇಷನ್ ಸಿಂಧೂರ' ಕಾರ್ಯಾಚರಣೆಯ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಕುರಿತು ಕರೆದಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನರಗುಂದ ಶಾಸಕ ಸಿ.ಸಿ. ಪಾಟೀಲ ಮಾತನಾಡಿ, ಏಪ್ರಿಲ್ 22ರಂದು ಪಹಲ್ಗಾಮದಲ್ಲಿ ಉಗ್ರರ ಅಟ್ಟಹಾಸಕ್ಕೆ 26 ಅಮಾಯಕ ನಾಗರಿಕರು ಬಲಿಯಾದರು. ಇದಕ್ಕೆ ಪ್ರತಿಯಾಗಿ ಆಪರೇಶನ್ ಸಿಂಧೂರ ಮಾಡಿದ್ದಾರೆ. ಇದರಲ್ಲಿ ಭಾಗಿಯಾದ ರಕ್ಷಣಾ ಪಡೆಯ ಮುಖ್ಯಸ್ಥರಿಗೆ, ಪ್ರಧಾನಮಂತ್ರಿ ನರೇಂದ್ರ ಮೋದಿ, ಅಜಿತ ದೋವೆಲ್, ಕರ್ನಲ್ ಸೋಫಿಯಾ ಖುರೇಶಿ, ವಿಂಗ್ ಕಮಾಂಡರ್ ವ್ಯೋಮಿಕಾ ಸಿಂಗ್‌ಗೆ ಅಭಿನಂದನೆ ಸಲ್ಲಿಸಿದರಲ್ಲದೆ, ಈ ಸಂದರ್ಭದಲ್ಲಿ ನಾವೆಲ್ಲರೂ ರಾಷ್ಟ್ರದ ಪರವಾಗಿ ನಿಲ್ಲೋಣ ಎಂದರು.

> ದೇಶದಲ್ಲಿರುವ 140 ಕೋಟಿ ಜನರು ಸೈನಿಕರಿಗೆ ಬೆಂಬಲ ನೀಡಿದ್ದೇವೆ. ನಾಗರಿಕರಾಗಿ ನಮ್ಮ ಜವಾಬ್ದಾರಿ-ಕರ್ತವ್ಯಗಳಿವೆ. ಜಿಲ್ಲೆಯಲ್ಲಿರುವ ಜನರನ್ನು ನಾವು ಜಾಗೃತ ಮಾಡಬೇಕು. ಜಿಲ್ಲೆಯಲ್ಲಿ ಮಾಜಿ ಸೈನಿಕರು, ಎನ್‌ಸಿಸಿ, ಎನ್‌ಎಸ್‌ಎಸ್, ಪೊಲೀಸ್ ಇಲಾಖೆಯವರು ಸಾರ್ವಜನಿಕರಿಗೆ ಈ ಕುರಿತು ಜಾಗೃತಿ ಮೂಡಿಸಬೇಕು. ಆಪರೇಶನ್ ಸಿಂಧೂರ ನಡೆದ ನಂತರ ಜಗತ್ತಿನ ಬಹುತೇಕ ರಾಷ್ಟ್ರಗಳು ಭಾರತದ ಬೆನ್ನಿಗೆ ನಿಂತಿವೆ. ಇದು ಅಭಿಮಾನದ ಸಂಗತಿ. ಎಲ್ಲ ಸಂದರ್ಭದಲ್ಲಿಯೂ ಸೈನಿಕರಿಗೆ ಬೆಂಬಲವಾಗಿ ನಿಲ್ಲುತ್ತೇವೆ.
>
> **- ಡಾ. ಎಚ್.ಕೆ. ಪಾಟೀಲ.**
> ಜಿಲ್ಲಾ ಉಸ್ತುವಾರಿ ಸಚಿವರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಪಹಲ್ಗಾಮ್‌ದಲ್ಲಿ ಕೇವಲ ಪುರುಷರನ್ನು ಹತ್ಯೆ ಮಾಡಿ ಮಹಿಳೆಯರ ಸಿಂಧೂರವನ್ನು ಅಳಿಸಿದ ಪರಿಣಾಮವಾಗಿ ಆಪರೇಷನ್ ಸಿಂಧೂರ ಕೈಗೊಳ್ಳಲಾಗಿದೆ. ಉಗ್ರರು ಪುನಃ ದೇಶದ ಮೇಲೆ ದಾಳಿ ಮಾಡಲು ಹೊಂಚು ಹಾಕುತ್ತಿರಬಹುದು. ಅದನ್ನು ಸಮರ್ಥವಾಗಿ ಎದುರಿಸಲು ಎಲ್ಲರೂ ಸಿದ್ಧರಾಗೋಣ ಎಂದರು.

ಕರ್ನಾಟಕ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್. ಪಾಟೀಲ ಮಾತನಾಡಿ, ಯುದ್ಧ ಪ್ರಾರಂಭವಾದರೆ ಎಲ್ಲಿಗೆ ತಲುಪುತ್ತದೆ ಎಂದು ಯಾರೂ ಊಹಿಸಲು ಸಾಧ್ಯವಿಲ್ಲ. ರಷ್ಯಾ ಉಕ್ರೇನ್ ನಡುವೆ ಪ್ರಾರಂಭವಾದ ಯುದ್ಧ ಇಂದಿಗೂ ನಡೆಯುತ್ತಿದೆ. ಯುದ್ಧದಲ್ಲಿ ಜನಸಾಮಾನ್ಯರ ಜೀವಹಾನಿಯಾಗಬಾರದು. ಸಭೆಗೆ ಆಗಮಿಸಿದ ಮಾಜಿ ಸೈನಿಕರನ್ನು ನೋಡಿ ನನಗೆ ದೇಶಭಕ್ತಿ ಇಮ್ಮಡಿಗೊಳ್ಳುತ್ತದೆ ಎಂದು ನುಡಿದರು.



ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಉಗ್ರರ ದಾಳಿ ಹೀನ ಕೃತ್ಯವಾಗಿದೆ. ಯುದ್ಧ ನಡೆದಲ್ಲಿ ಜನರ ಜೀವ ರಕ್ಷಣೆಗೆ ಮುಂಜಾಗ್ರತಾ ಕ್ರಮಗಳನ್ನು ಸಂಬಂಧಪಟ್ಟ ಅಧಿಕಾರಿಗಳು ಕೈಗೊಳ್ಳಬೇಕು ಎಂದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ದೇಶ ಮತ್ತು ರಾಜ್ಯದಲ್ಲಿ ಯುದ್ಧ ಎದುರಿಸಲು ನಾವೆಲ್ಲ ಸನ್ನದ್ಧರಾಗಬೇಕು. ದಾಳಿಗೆ ಪ್ರತಿ ದಾಳಿ ಮಾಡಿದಲ್ಲಿ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಕುರಿತು ಜನಸಾಮಾನ್ಯರಿಗೆ ಜಾಗೃತಿ ಮೂಡಿಸೋಣ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಮಾತನಾಡಿ, ಈ ಸಭೆಯು ನಮಗೆಲ್ಲ ಪ್ರೇರಣೆ ಮತ್ತು ಜಾಗೃತಿ ಮೂಡಿಸಿದೆ. ಜಿಲ್ಲಾ, ತಾಲೂಕು ಮಟ್ಟದಲ್ಲಿ ತಮ್ಮ ನಿರೀಕ್ಷೆಗೆ ತಕ್ಕಂತೆ ನಾವು ಕಾರ್ಯನಿರ್ವಹಿಸಲು ಸಿದ್ಧರಾಗಿದ್ದೇವೆ ಎಂದು ತಿಳಿಸಿದರು.

ಜಿ . ಪ ' ಂ ▶▶3ನೇ ಪುಟಕ್ಕೆ

## ಚುನಾವಣಾ ವೇಳಾಪಟ್ಟಿ ಪ್ರಕಟ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಚುನಾವಣಾ ಆಯೋಗದ ಆದೇಶದನ್ವಯ ಗದಗ ಜಿಲ್ಲೆಯ ಲಕ್ಷ್ಮೇಶ್ವರ ತಾಲೂಕಿನ ಶಿಗ್ಲಿ, ಗಜೇಂದ್ರಗಡ ತಾಲೂಕಿನ ನಿಡಗುಂದಿ, ಶಿರಹಟ್ಟಿ ತಾಲೂಕಿನ ಕೋಗನೂರ ಗ್ರಾಮ ಪಂಚಾಯಿತಿಗಳಲ್ಲಿ ವಿವಿಧ ಕಾರಣಗಳಿಂದ ತೆರವಾಗಿರುವ/ಖಾಲಿ ಉಳಿದಿರುವ ಸದಸ್ಯ ಸ್ಥಾನಗಳಿಗೆ ಉಪಚುನಾವಣೆ ಜರುಗಲಿದೆ.

ರಾಜ್ಯ ಚುನಾವಣಾ ಆಯೋಗವು ಚುನಾವಣಾ ವೇಳಾಪಟ್ಟಿಯನ್ನು ಹೊರಡಿಸಿದೆ. ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನ ಮೇ 8 ಆಗಿದ್ದು, ನಾಮಪತ್ರಗಳನ್ನು ಮೇ 8ರಿಂದ ಮೇ 14ರವರೆಗೆ ಸಲ್ಲಿಸಬಹುದಾಗಿದೆ.

ಮೇ 15ರಂದು ನಾಮಪತ್ರಗಳನ್ನು ಪರಿಶೀಲಿಸಲಾಗುವುದು. ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳುವ ಕೊನೆಯ ದಿನ ಮೇ 17 ಆಗಿರುತ್ತದೆ.

ಮತದಾನವನ್ನು ಮೇ 25ರಂದು ಬೆಳಿಗ್ಗೆ 7 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ನಡೆಸಲಾಗುವುದು.

ಮತಗಳ ಎಣಿಕೆಯು ಮೇ 28ರಂದು ತಾಲೂಕು ಕೇಂದ್ರಗಳಲ್ಲಿ ನಡೆಯಲಿದ್ದು, ಅಂದೇ ಚುನಾವಣಾ ಪ್ರಕ್ರಿಯೆ ಮುಕ್ತಾಯಗೊಳ್ಳಲಿದೆ ಎಂದು ಜಿಲ್ಲಾಧಿಕಾರಿಗಳ ಕಾರ್ಯಾಲಯದ ಚುನಾವಣಾ ವಿಭಾಗದ ಪ್ರಕಟಣೆ ತಿಳಿಸಿದೆ.

### ಶಿವಶರಣೆ ಹೇಮರಡ್ಡಿ ಮಲ್ಲಮ್ಮನವರ ಜಯಂತ್ಯುತ್ಸವ ನಾಳೆ: ಶೈಲಜಾ ಕವಲೂರ

# ಮಲ್ಲಮ್ಮನವರ ಕರುಣಾಭಾವ ಇಂದಿಗೂ ಪ್ರಸ್ತುತ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಡಳಿತ, ಗದಗ ಜಿಲ್ಲಾ ರೆಡ್ಡಿ ಸಮಾಜ ಸಂಘದ ವತಿಯಿಂದ ಶಿವಶರಣೆ ಹೇಮರಡ್ಡಿ ಮಲ್ಲಮ್ಮನವರ 603ನೇ ಜಯಂತಿಯನ್ನು ಮೇ. 10ರಂದು ಬೆಳಿಗ್ಗೆ 10:30ಕ್ಕೆ ಕಳಸಾಪೂರ ರಸ್ತೆಯ ಶ್ರೀ ಶಿವಾನಂದ ಕಲ್ಯಾಣ ಮಂಟಪದಲ್ಲಿ ಏರ್ಪಡಿಸಲಾಗಿದ್ದು, ಜಯಂತಿಯ ಅಂಗವಾಗಿ ಮುತ್ತೈದೆಯರಿಗೆ ಉಡಿ ತುಂಬುವದು, ಸಾಂಸ್ಕೃತಿಕ ಕಾರ್ಯಕ್ರಮ, ಅನ್ನಸಂತರ್ಪಣೆ, ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಸಾಧಕರಿಗೆ ಹಾಗೂ ದಾನಿಗಳಿಗೆ ಸನ್ಮಾನ ಸೇರಿದಂತೆ ಹಲವು ಕಾರ್ಯಕ್ರಮಗಳು ನಡೆಯಲಿವೆ ಎಂದು ಶೈಲಜಾ ಕವಲೂರ ತಿಳಿಸಿದರು.

ಇಲ್ಲಿನ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಪಾಲ್ಗೊಳ್ಳಲಿದ್ದಾರೆ. ರೋಣ ಶಾಸಕ ಜಿ.ಎಸ್. ಪಾಟೀಲ, ಮಾಜಿ ಸಚಿವ ಬಿ.ಆರ್. ಯಾವಗಲ್, ಮಾಜಿ ಶಾಸಕ ಡಿ.ಆರ್. ಪಾಟೀಲ ಆಗಮಿಸಲಿದ್ದು, ಅನೇಕ ಗಣ್ಯರು ಪಾಲ್ಗೊಳ್ಳಲಿದ್ದಾರೆ ಎಂದು ಮಾಹಿತಿ ನೀಡಿದರು.

ಮಹಾನ್ ಶರಣೆ, ಭಕ್ತ ಶಿರೋಮಣಿ, ತ್ಯಾಗ ಮತ್ತು ನಿಷ್ಠೆಯ ಹೇಮರಡ್ಡಿ ಮಲ್ಲಮ್ಮನವರ ಪುಣ್ಯ ಜಯಂತಿಯನ್ನು ಆಚರಿಸುತ್ತಿದ್ದೇವೆ. ಹೇಮರಡ್ಡಿ ಮಲ್ಲಮ್ಮನವರ ಜೀವನವು ಭಕ್ತಿ, ಶ್ರದ್ಧೆಯ ಉತ್ತಮ ನಿದರ್ಶನವಾಗಿದೆ. ಸಂಸಾರದಲ್ಲಿದ್ದುಕೊಂಡೇ ಆಧ್ಯಾತ್ಮ ಸಾಧನೆಯನ್ನು ಮಾಡಿದವರು. ಅವರ ಕಾಯಕ ನಿಷ್ಠೆ, ಅತಿಥಿ ಸತ್ಕಾರ ಹಾಗೂ ಸಮಾಜದ ಕಟ್ಟಕಡೆಯ ವ್ಯಕ್ತಿಯ ಮೇಲೆಯೂ ತೋರಿದ ಕರುಣೆ ಮತ್ತು ಸಮಾನತೆಯ ಭಾವನೆಗಳು ಇಂದಿಗೂ ಪ್ರಸ್ತುತವಾಗಿದೆ ಎಂದರು.




ಕಾರ್ಯಕ್ರಮ ಯಶಸ್ವಿಗೊಳಿಸಲು ಸಮಾಜದ ಪ್ರಮುಖ ಮುಖಂಡರು ಕಳೆದ ಒಂದು ತಿಂಗಳಿಂದ ಹಲವಾರು ಸಲ ಪೂರ್ವಭಾವಿ ಸಭೆಗಳನ್ನು ನಡೆಸಿ ಗದಗ ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿ ಪ್ರಮುಖ ಪಟ್ಟಣ ಮತ್ತು ಗ್ರಾಮಗಳಿಗೆ ಭೇಟಿ ಕೊಟ್ಟು ಆಮಂತ್ರಣ ಪತ್ರಿಕೆಗಳನ್ನು ನೀಡಲಾಗಿದೆ. ಸದರಿ ಕಾರ್ಯಕ್ರಮ ಯಶಸ್ವಿಗೊಳಿಸಲು ಎಲ್ಲ ವ್ಯವಸ್ಥೆಗಳನ್ನು ಮಾಡಲಾಗಿದೆ. ಕಾರಣ, ಗದಗ ಜಿಲ್ಲೆಯ ರಡ್ಡಿ ಸಮಾಜ ಬಾಂಧವರು ಕಾರ್ಯಕ್ರಮಕ್ಕೆ ಆಗಮಿಸಿ, ಹೇಮರಡ್ಡಿ ಮಲ್ಲಮ್ಮನವರ ಜಯಂತಿಯನ್ನು ಯಶಸ್ವಿಗೊಳಿಸಬೇಕು ಎಂದು ಕರೆ ನೀಡಿದರು.

> ಮಲ್ಲಮ್ಮನವರು ಕೇವಲ ಒಂದು ಧರ್ಮಕ್ಕೆ ಸೀಮಿತರಾಗದೆ ಮಾನವೀಯ ಮೌಲ್ಯಗಳಿಗೆ ಆದ್ಯತೆ ನೀಡಿದರು. ಸರಳತೆ, ಸಜ್ಜನಿಕೆ ಮತ್ತು ನಿಸ್ವಾರ್ಥ ಸೇವೆ ಇವು ಹೇಮರಡ್ಡಿ ಮಲ್ಲಮ್ಮನವರ ವ್ಯಕ್ತಿತ್ವದ ಪ್ರಮುಖ ಗುಣಗಳಾಗಿದ್ದವು. ಇಂದಿನ ಸಮಾಜದಲ್ಲಿ ಶಾಂತಿ, ನೆಮ್ಮದಿ ಮತ್ತು ಸೌಹಾರ್ದತೆ ನೆಲೆಸಬೇಕಾದರೆ ಹೇಮರಡ್ಡಿ ಮಲ್ಲಮ್ಮನಂತಹ ಶರಣರು ತೋರಿದ ದಾರಿಯಲ್ಲಿ ನಡೆಯುವದು ಅತ್ಯಗತ್ಯವಾಗಿದೆ ಎಂದು ಶೈಲಜಾ ಕವಲೂರ ಹೇಳಿದರು.

ಈ ಸಂದರ್ಭದಲ್ಲಿ ಸುಮಾ ಶಿವನಗೌಡರ, ಶೈಲಾ ಬೆಂತೂರ, ಸವಿತಾ ಹೊಸಮನಿ, ಪ್ರೇಮಾ ಮೇಟಿ, ಕಸ್ತೂರಿ ಹಿರೇಗೌಡ್ರ, ಭಾಗ್ಯ ಶಿರೋಳ, ಯಶೋಧಾ ಗದ್ದಿಕೇರಿ, ಸುನೀತಾ ಕೋನರಡ್ಡಿ, ಲತಾ ಮುಂಬಾರಡ್ಡಿ, ಶೋಭಾ ಭೂಮರಡ್ಡಿ, ರಾಜಶ್ರೀ ಶಿರೋಳ, ಸೌಮ್ಯ ಹುಚ್ಚಣ್ಣವರ ಮುಂತಾದವರು ಉಪಸ್ಥಿತರಿದ್ದರು.

### ಶ್ರೀ ಸೋಮೇಶ್ವರ ದೇವಸ್ಥಾನದ ಜಾತ್ರಾ ಮಹೋತ್ಸವ

## ಶ್ರದ್ಧಾ-ಭಕ್ತಿಯ ಕಡುಬಿನ ಕಾಳಗ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನದ ಜಾತ್ರಾ ಮಹೋತ್ಸವದ ಅಂಗವಾಗಿ ಗುರುವಾರ ಗೋಧೂಳಿ ಸಮಯದಲ್ಲಿ ಅಪಾರ ಭಕ್ತ ಸಮೂಹದ ನಡುವೆ ಶ್ರದ್ಧಾ-ಭಕ್ತಿಯಿಂದ ಕಡುಬಿನ ಕಾಳಗ ನೆರವೇರಿತು.

ಕಡುಬಿನ ಕಾಳಗದ ಸಂದರ್ಭದಲ್ಲಿ ಸೋಮೇಶ್ವರ ದೇವರ ಉತ್ಸವ ಮೂರ್ತಿಯೊಂದಿಗೆ ಪಲ್ಲಕ್ಕಿಯು ದೇವಸ್ಥಾನದ ಆವರಣದ, ರಥಬೀದಿ ಪ್ರದಕ್ಷಣೆ ಮತ್ತು ಅಲ್ಲಿಂದ ಸೋಮೇಶ್ವರ ಪಾದಗಟ್ಟಿಗೆ ತೆರಳಿ ಅಲ್ಲಿ 5 ಸುತ್ತು ಪ್ರದಕ್ಷಣೆಯೊಂದಿಗೆ ಕಡುಬಿನ ಕಾಳಗ ನೆರವೇರಿಸಲಾಯಿತು. ಈ ವೇಳೆ ಮುಳಗುಂದ ಮನೆತನದವರು ಸಂಪ್ರದಾಯದಂತೆ ಕಡುಬಿನ ಚೂರುಗಳು, ಬೆಂಡು, ಬತ್ತಾಸ, ಬೆಲ್ಲ, ಹಣ್ಣು, ಕಲ್ಲುಸಕ್ಕರೆ ಇತ್ಯಾದಿ ಸಿಹಿ ಪದಾರ್ಥಗಳನ್ನು ಸೇರಿದ್ದ ಅಪರ ಭಕ್ತ ಸಮೂಹದತ್ತ ಎಸೆದರು.

ಸೇರಿದ್ದ ಭಕ್ತರು ಅವುಗಳನ್ನು ಭಕ್ತಿಯಿಂದ ಆಯ್ದುಕೊಂಡು ಸ್ವೀಕರಿಸಿ ಈ ಪ್ರಸಾದ ಸೇವನೆಯಿಂದ ನಮ್ಮ ಬದುಕಿನ ಕಷ್ಟ ಕಾರ್ಪಣ್ಯಗಳು, ರೋಗ-ರುಜಿನಗಳು ದೂರಾಗಲಿ ಎಂದು ಪ್ರಾರ್ಥಿಸಿದರು. ಸೋಮೇಶ್ವರ ಜಾತ್ರಾ ಕಮಿಟಿಯ ಮುಖಂಡರಾದ ಕುಬೇರಪ್ಪ ಮಹಾಂತಶೆಟ್ಟರ, ಚನ್ನಪ್ಪ ಜಗಲಿ, ವಿರೂಪಾಕ್ಷ ಆದಿ, ಬಸವರಾಜ ಮೆಣಸಿನಕಾಯಿ, ಸೋಮಣ್ಣ ಮುಳಗುಂದ, ಅಶೋಕ ಮುಳಗುಂದ, ರಾಮಣ್ಣ ಗೌರಿ, ಶಿವಯೋಗಿ ಅಂಕಲಕೋಟಿ, ಈರಣ್ಣ ಮುಳಗುಂದ, ಸಿದ್ದನಗೌಡ ಬಳ್ಳೊಳ್ಳಿ, ಬಸಣ್ಣ ಬಾಳಿಕಾಯಿ, ನಂದೀಶ ಬಂಡಿವಾಡ, ಪ್ರಕಾಶ ಮುಳಗುಂದ, ದೀಪು ಕೊಂಚಿಗೇರಿಮಠ ಅರ್ಚಕರಾದ ಸಮೀರ ಪೂಜಾರ ಸೇರಿದಂತೆ ದೇವಸ್ಥಾನ ಜಾತ್ರಾ ಸಮಿತಿಯವರು, ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿಯವರು, ಹಿರಿಯರು, ಅರ್ಚಕರ ಸಮಿತಿಯವರು, ಯುವಕರ ತಂಡ, ಭಕ್ತರು ಪಾಲ್ಗೊಂಡಿದ್ದರು.


## ತುಟ್ಟಿಭತ್ಯೆ ಹೆಚ್ಚಿಸಿದ ರಾಜ್ಯ ಸರ್ಕಾರ

## ಡಾ. ಬಸವರಾಜ ಬಳ್ಳಾರಿ ಅಭಿನಂದನೆ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರಕಾರಿ ನೌಕರರ ತುಟ್ಟಿ ಭತ್ಯೆ ಜನೇವರಿ 1ರಿಂದ ಪೂರ್ವಾನ್ವಯವಾಗುವಂತೆ ಶೇ. 1.50ರಷ್ಟು ಏರಿಕೆ ಮಾಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರಕಾರವನ್ನು ಗದಗ ಜಿಲ್ಲಾ ಸರಕಾರಿ ನೌಕರರ ಸಂಘದ ಅಧ್ಯಕ್ಷ ಡಾ. ಬಸವರಾಜ ಬಳ್ಳಾರಿ ಅಭಿನಂಧಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ರಾಜ್ಯ ಸರಕಾರಿ ನೌಕರರ ತುಟ್ಟಿ ಭತ್ಯೆ ಈ ಮೊದಲು 10.76ರಷ್ಟು ಇತ್ತು. ಇದೀಗ 1.50ರಷ್ಟು ತುಟ್ಟಿ ಭತ್ಯೆಯನ್ನು ರಾಜ್ಯ ಸರಕಾರ ಹೆಚ್ಚಳ ಮಾಡಿರುವುದರಿಂದ ಶೇ. 12.25ಕ್ಕೆ ಏರಿಕೆಯಾಗಿದೆ. ತುಟ್ಟಿ ಭತ್ಯೆ ಹೆಚ್ಚಳ ಮಾಡುವಲ್ಲಿ ಅವಿರತ ಶ್ರಮಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.



ಶಿವಕುಮಾರ ಹಗೂ ಸಮಸ್ತ ಸಚಿವರನ್ನು ರಾಜ್ಯ ಸರಕಾರಿ ನೌಕರರ ಪರವಾಗಿ ಅಭಿನಂದಿಸಿದ್ದಾರೆ.

ಈ ಬೇಡಿಕೆ ಈಡೇರಿಕೆಗಾಗಿ ರಾಜ್ಯ ಸರಕಾರದ ಗಮನ ಸೆಳೆದು ಯಶಸ್ವಿಯಾಗಿರುವ ರಾಜ್ಯ ಸರಕಾರಿ ನೌಕರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಕ್ಷರಿ ಅವರನ್ನು, ರಾಜ್ಯ ಮತ್ತು ಗದಗ ಜಿಲ್ಲೆಯ ಸಮಸ್ತ ಸರಕಾರಿ ನೌಕರರ ಪರವಾಗಿ ಡಾ. ಬಸವರಾಜ ಬಳ್ಳಾರಿ ಅಭಿನಂದಿಸಿದ್ದಾರೆ.

### ಕಾರ್ಮಿಕರ ಆರೋಗ್ಯ ಸೇವೆಗಾಗಿ ವಾಹನ ಲೋಕಾರ್ಪಣೆಗೊಳಿಸಿದ ಸಚಿವ ಎಚ್.ಕೆ.ಪಾಟೀಲ

## ಕಾರ್ಮಿಕರ ಆರೋಗ್ಯ ಸಂರಕ್ಷಣೆಗೆ ಆದ್ಯತೆ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನಿರ್ದೇಶನದಲ್ಲಿ ಕಾರ್ಮಿಕ ಸಚಿವರಾದ ಸಂತೋಷ ಲಾಡ್ ಅವರಿಂದ ಕಾರ್ಮಿಕರ ಆರೋಗ್ಯ ರಕ್ಷಣೆ ಆಗುತ್ತಿದೆ. ಕಾರ್ಮಿಕರ ಆರೋಗ್ಯ ರಕ್ಷಣೆಯನ್ನೇ ಮುಖ್ಯ ಗುರಿಯಾಗಿಟ್ಟುಕೊಂಡು ಅವರಿಗೆ ಆರೋಗ್ಯ ಸೇವೆಯನ್ನು ಒದಗಿಸುವುದಕ್ಕಾಗಿ ಈ ವಾಹನವನ್ನು ಲೋಕಾರ್ಪಣೆಗೊಳಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್. ಕೆ. ಪಾಟೀಲ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿ ಗುರುವಾರ ಕಾರ್ಮಿಕ ಇಲಾಖೆಯ ಆರೋಗ್ಯ ತಪಾಸಣೆ ಹಾಗೂ ಚಿಕಿತ್ಸೆ ಒದಗಿಸುವ ವಾಹನವನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು. ಈ ಹಿಂದೆ ಅರಬೈಲ್ ಶಿವರಾಂ ಹೆಬ್ಬಾರ ಅವರು ಕಾರ್ಮಿಕ ಸಚಿವರಾಗಿದ್ದಾಗ ಕಾರ್ಮಿಕರ ಆರೋಗ್ಯ ಸೇವೆಗಾಗಿ ಸದರಿ ವಾಹನದ ಕುರಿತು ಪ್ರಸ್ತಾವನೆಯನ್ನು ಸಲ್ಲಿಸಿದ್ದರು. ಅದು ಈಗ ಕಾರ್ಯರೂಪಕ್ಕೆ ಬಂದಿದ್ದು, ಅವರಿಗೆ ಈ ಸಂದರ್ಭದಲ್ಲಿ ಧನ್ಯವಾದಗಳನ್ನು ಅರ್ಪಿಸುತ್ತೇನೆ ಎಂದರು. ಕಾರ್ಮಿಕರಿಗೆ ಆರೋಗ್ಯ ಸಮಸ್ಯೆ ಉಂಟಾದಲ್ಲಿ ಅವರಿದ್ದ ಕಡೆಗೇ ಈ ವಾಹನವು ಸಂಚರಿಸಿ ಅವರಿಗೆ ಆರೋಗ್ಯ ಸೇವೆ ಒದಗಿಸಲಿದೆ. ಒಂದು ವರ್ಷದಲ್ಲಿ ಅವರ ಗುಣಮಟ್ಟದಲ್ಲಿ ಸುಧಾರಣೆಯಾಗಬೇಕು. ಸರ್ಕಾರದ ಈ ಯೋಜನೆಯ ಸೌಲಭ್ಯವನ್ನು ಎಲ್ಲ ಕಾರ್ಮಿಕರು ಸದುಪಯೋಗ ಪಡಿಸಿಕೊಳ್ಳಬೇಕೆಂದು ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.



ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಗಣ್ಯರಾದ ಸಿದ್ದು ಪಾಟೀಲ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಕಾರ್ಮಿಕ ಇಲಾಖೆಯ ಅಧಿಕಾರಿ ಶ್ರೈಶೈಲ ಸೋಮನಕಟ್ಟಿ, ಯುವಜನ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ ಸೇರಿದಂತೆ ಇತರರು ಇದ್ದರು.

## ಸಂಪಾದಕೀಯ

# ಭಯೋತ್ಪಾದನೆಯ ಬೇರು ಕಿತ್ತು ಹಾಕಲು ದೃಢ ಸಂಕಲ್ಪದ ಅಗತ್ಯ

ಕೇಂದ್ರ ಸರ್ಕಾರವು ಕೈಗೊಂಡ ಆಪರೇಶನ್ ಸಿಂಧೂರ ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ಒಂದು ಸ್ವಾಗತಾರ್ಹ ಕ್ರಮ. ಆದರೆ ಇದು ಕೇವಲ ಆರಂಭ ಮಾತ್ರ. ಭಯೋತ್ಪಾದನೆಯೆಂಬ ಪಿಡುಗನ್ನು ನಮ್ಮ ನೆಲದಿಂದ ಸಂಪೂರ್ಣವಾಗಿ ಕಿತ್ತೊಗೆಯಲು ನಾವು ಇನ್ನೂ ದೂರ ಸಾಗಬೇಕಿದೆ. ಈ ನಿಟ್ಟಿನಲ್ಲಿ ಸರ್ಕಾರವು ಕಠಿಣ ಸವಾಲುಗಳನ್ನು ಎದುರಿಸಬೇಕಾಗುತ್ತದೆ ಮತ್ತು ಅವುಗಳನ್ನು ಎದುರಿಸಲು ದೃಢವಾದ ಸಂಕಲ್ಪವನ್ನು ಪ್ರದರ್ಶಿಸಬೇಕಾಗುತ್ತದೆ.

ಭಯೋತ್ಪಾದನೆಯನ್ನು ನಿರ್ಮೂಲನೆ ಮಾಡುವುದು ಸುಲಭದ ಕೆಲಸವಲ್ಲ. ಗುಪ್ತಚರ ಮಾಹಿತಿಯ ಕೊರತೆ, ಅಂತರರಾಷ್ಟ್ರೀಯ ಸಹಕಾರದ ಕೊರತೆ, ಭಯೋತ್ಪಾದಕರಿಗೆ ಹಣಕಾಸಿನ ನೆರವು, ಅವರ ಸೈದ್ಧಾಂತಿಕ ಪ್ರಭಾವ ಮತ್ತು ರಾಜಕೀಯ ಇಚ್ಛಾಶಕ್ತಿಯಂತಹ ಅನೇಕ ಅಡೆತಡೆಗಳಿವೆ. ಈ ಎಲ್ಲಾ ಸವಾಲುಗಳನ್ನು ಸಮರ್ಥವಾಗಿ ಎದುರಿಸಲು ಸರ್ಕಾರವು ಸಮಗ್ರವಾದ ಮತ್ತು ದೀರ್ಘಕಾಲೀನ ಕಾರ್ಯತಂತ್ರವನ್ನು ರೂಪಿಸಬೇಕಾಗುತ್ತದೆ.

ಮೊದಲನೆಯದಾಗಿ, ಗುಪ್ತಚರ ವ್ಯವಸ್ಥೆಯನ್ನು ಬಲಪಡಿಸುವುದು ಅತ್ಯಗತ್ಯ. ಭಯೋತ್ಪಾದಕ ಸಂಘಟನೆಗಳ ಚಲನವಲನಗಳು ಮತ್ತು ಅವರ ಯೋಜನೆಗಳ ಬಗ್ಗೆ ನಿಖರವಾದ ಮಾಹಿತಿ ಪಡೆಯಲು ಆಧುನಿಕ ತಂತ್ರಜ್ಞಾನ ಮತ್ತು ಪರಿಣಿತ ಮಾನವ ಸಂಪನ್ಮೂಲವನ್ನು ಬಳಸಿಕೊಳ್ಳಬೇಕು.

ಎರಡನೆಯದಾಗಿ, ಅಂತರರಾಷ್ಟ್ರೀಯ ಮಟ್ಟದಲ್ಲಿ ಭಯೋತ್ಪಾದನೆಯ ವಿರುದ್ಧ ಒಗ್ಗಟ್ಟಿನ ಹೋರಾಟ ನಡೆಸಲು ಇತರ ರಾಷ್ಟ್ರಗಳೊಂದಿಗೆ ಸಹಕಾರವನ್ನು ಹೆಚ್ಚಿಸಬೇಕು. ಮಾಹಿತಿ ವಿನಿಮಯ ಮತ್ತು ಜಂಟಿ ಕಾರ್ಯಾಚರಣೆಗಳ ಮೂಲಕ ಭಯೋತ್ಪಾದಕ ಜಾಲಗಳನ್ನು ಭೇದಿಸಬಹುದು.

ಮೂರನೆಯದಾಗಿ, ಭಯೋತ್ಪಾದಕರಿಗೆ ಹಣದ ಮೂಲಗಳನ್ನು ಕಡಿತಗೊಳಿಸುವುದು ನಿರ್ಣಾಯಕ. ಅಕ್ರಮ ಹಣ ವರ್ಗಾವಣೆ ಮತ್ತು ಇತರ ಆರ್ಥಿಕ ಚಟುವಟಿಕೆಗಳ ಮೇಲೆ ಕಣ್ಣಿಡಬೇಕು. ನಾಲ್ಕನೆಯದಾಗಿ, ಭಯೋತ್ಪಾದಕರು ಹರಡುವ ತಪ್ಪು ಸಿದ್ಧಾಂತಗಳ ವಿರುದ್ಧ ಯುವಜನರಲ್ಲಿ ಜಾಗೃತಿ ಮೂಡಿಸಬೇಕು ಮತ್ತು ಸಕಾರಾತ್ಮಕ ಮೌಲ್ಯಗಳನ್ನು ಬೆಳೆಸಬೇಕು.

ಕೊನೆಯದಾಗಿ, ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ಸರ್ಕಾರವು ಸ್ಥಿರವಾದ ರಾಜಕೀಯ ಇಚ್ಛಾಶಕ್ತಿಯನ್ನು ಪ್ರದರ್ಶಿಸಬೇಕು. ಯಾವುದೇ ಒತ್ತಡ ಅಥವಾ ರಾಜಕೀಯ ಲಾಭಕ್ಕಾಗಿ ಈ ಹೋರಾಟವನ್ನು ದುರ್ಬಲಗೊಳಿಸಬಾರದು.

ಆಪರೇಶನ್ ಸಿಂಧೂರ ಒಂದು ಉತ್ತಮ ಆರಂಭ. ಆದರೆ ಭಯೋತ್ಪಾದನೆಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಸರ್ಕಾರವು ಇನ್ನಷ್ಟು ದಿಟ್ಟ ಕ್ರಮಗಳನ್ನು ಕೈಗೊಳ್ಳಬೇಕಿದೆ. ಎಲ್ಲಾ ಸವಾಲುಗಳನ್ನು ಎದುರಿಸಿ, ದೃಢ ಸಂಕಲ್ಪದಿಂದ ಮುನ್ನಡೆದರೆ ಮಾತ್ರ ನಾವು ಭಯಮುಕ್ತ ಸಮಾಜವನ್ನು ನಿರ್ಮಿಸಲು ಸಾಧ್ಯ.



ಗದಗ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕು ಅಧಿಕಾರಿ ಡಾ. ಬಸವರಾಜ ಬಳ್ಳಾರಿ ಅವರು ರಾಜ್ಯ ಸರಕಾರಿ ನೌಕರ ಸಂಘದ ಗದಗ ಜಿಲ್ಲಾಧ್ಯಕ್ಷರಾಗಿ ಆಯ್ಕೆಯಾಗಿರುವ ಹಿನ್ನೆಲೆಯಲ್ಲಿ ಇಲ್ಲಿನ ಅಭಿನವ ಸೇವಾ ಸಮಿತಿಯ ವತಿಯಿಂದ ಅಭಿನವ ಆಂಜನೇಯ ದೇವಸ್ಥಾನದ ಆವರಣದಲ್ಲಿ ಡಾ. ಪುಷ್ಪಾ-ಡಾ. ಬಸವರಾಜ ಬಳ್ಳಾರಿ ದಂಪತಿಗಳನ್ನು ಸನ್ಮಾನಿಸಿ, ಅಭಿನಂಧಿಸಿದರು. ಈ ಸಂದರ್ಭದಲ್ಲಿ ಸಮಿತಿಯ ಅಧ್ಯಕ್ಷ ಬಸವರಾಜ ಕಿರಟಗೇರಿ, ಉಪಾಧ್ಯಕ್ಷ ಎ.ಎಂ. ಅಂಗಡಿ, ವಿನೋದ, ಗಂಗಾಧರ ತಳವಾರ, ಡಾ. ವಿಶ್ವನಾಥ ವಿರಕ್ತಮಠ, ಸುಭಾಷ ಮಳಗಿ ಸೇರಿದಂತೆ ಸಮಿತಿಯ ಪದಾಧಿಕಾರಿಗಳು, ಸದಸ್ಯರು ಇದ್ದರು.

### ಶಿಗ್ಲಿಯ ಶ್ರೀ ಗುರು ಕೊಟ್ಟೂರೇಶ್ವರಸ್ವಾಮಿ ಮಠದ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಶ್ರೀ ಫಕೀರ ದಿಂಗಾಲೇಶ್ವರ ಶ್ರೀಗಳು

# ಮಠಗಳು ಶ್ರದ್ಧಾ-ಭಕ್ತಿಯ ಕೇಂದ್ರಗಳು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೇವಸ್ಥಾನ, ಮಠ-ಮಂದಿರಗಳ ಕಲ್ಪನೆಯ ಭಾರತ ಸಾಂಸ್ಕೃತಿಕ ಶ್ರೀಮಂತಿಕೆಗೆ ಸಾಕ್ಷಿಯಾಗಿದೆ ಮತ್ತು ಈ ನಾಡಿನ ದೇವಸ್ಥಾನಗಳು, ಧಾರ್ಮಿಕ ಪರಂಪರೆಗಳು, ದೇವರು, ಋಷಿ-ಮುನಿಗಳು, ಘಣಾದೀಶ್ವರರ ಲೀಲೆ, ಪವಾಡ, ಧರ್ಮ, ಸಂಪ್ರದಾಯ, ಆಚರಣೆಗಳು ವಿಜ್ಞಾನಕ್ಕೆ ಸವಾಲಾಗಿವೆ ಎಂದು ಬಾಲೆಹೊಸೂರ ಶಿರಹಟ್ಟಿ ಫಕ್ಕೀರೇಶ್ವರ ಸಂಸ್ಥಾನಮಠದ ಶ್ರೀ ಜ. ಫಕೀರ ದಿಂಗಾಲೇಶ್ವರ ಮಹಾಸ್ವಾಮಿಗಳು ಹೇಳಿದರು.

ಅವರು ಗುರುವಾರ ತಾಲೂಕಿನ ಶಿಗ್ಲಿ ಗ್ರಾಮದ ಶ್ರೀ ಗುರು ಕೊಟ್ಟೂರೇಶ್ವರಸ್ವಾಮಿ ಮಠದ ಲೋಕಾರ್ಪಣೆ, ಮೂರ್ತಿ ಪ್ರತಿಷ್ಠಾಪನೆ ಮತ್ತು ಕಳಸಾರೋಹಣ ಬಳಿಕ ನಡೆದ ಧರ್ಮಸಭೆಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.



ಮಠ-ಮಂದಿರಗಳು ಶ್ರದ್ಧಾ ಭಕ್ತಿಯ ಕೇಂದ್ರಗಳಾಗಿದ್ದು, ಜನರಲ್ಲಿ ಧಾರ್ಮಿಕ ಜಾಗೃತಿ ಮೂಡಿಸಿ ದೇವರು, ಧರ್ಮ, ನಂಬಿಕೆ, ವಿಶ್ವಾಸ ಮೂಡಿಸಿ ಸನ್ಮಾರ್ಗ-ಸನ್ನಡತೆಯುಳ್ಳ ಬದುಕಿನತ್ತ ಕೊಂಡ್ಯೊಯ್ಯುತ್ತವೆ. ಗುರುವಿಲ್ಲದ ಮಠ, ದೇವರಿಲ್ಲದ ಗುಡಿ ಮತ್ತು ಹಿರಿಯರಿಲ್ಲ ಮನೆ ಶ್ರೇಷ್ಠವಲ್ಲ. ಮಠ ಮತ್ತು ಮಂದಿರಗಳಿಗೆ ವ್ಯತ್ಯಾಸವಿದೆ. ಮಠಗಳ ಉದ್ದೇಶ ಜ್ಞಾನ ಪ್ರಧಾನವಾಗಿದ್ದರೆ, ದೇವಸ್ಥಾನಗಳು ಕರ್ಮ ಪ್ರಧಾನವಾಗಿವೆ. ರಾಮಾಯಣದ ಕಾಲದಲ್ಲಿ ಋಷಿಗಳು ಪ್ರಧಾನವಾಗಿದ್ದರೆ, ಮಹಾಭಾರತ ಕಾಲದಲ್ಲಿ ಮುನಿಗಳು ಪ್ರಧಾನವಾಗಿದ್ದಾರೆ.

ನಂತರದಲ್ಲಿ ಗಣಾಧೀಶ್ವರ, ದಾಸರು, ಶರಣರು, ಸಂತರು, ಜಂಗಮರು, ಮಠಾಧೀಶರು ಬರುತ್ತಾರೆ. ಗ್ರಾಮೀಣ ಜನರಿಗೆ ಧರ್ಮೋಪದೇಶ ಮಾಡಿ ಕನ್ನಡ ನಾಡಿನಲ್ಲಿ ಸಂಚರಿಸಿ ಚರಿಸುವ ಜಂಗಮ ಶ್ರೇಷ್ಠರು. ಶ್ರೀ ಕೊಟ್ಟೂರ ಬಸವೇಶ್ವರರು ಜನಹಿತ, ಲೋಕ ಕಲ್ಯಾಣಕ್ಕಾಗಿ ತಮ್ಮನ್ನೇ ಸಮರ್ಪಿಸಿಕೊಂಡಿದ್ದಾರೆ. ಇಂತಹ ದೇವರ ಸ್ವರೂಪದ ಮಹಾತ್ಮರ ಸ್ಮರಣೆ, ಧಾರ್ಮಿಕ ಆಚರಣೆ, ಸಂಪ್ರದಾಯ, ಪರಂಪರೆಗಳು ನಿರಂತರವಾಗಿರಲಿ.

ಮನುಷ್ಯ ಜನ್ಮದ ಸಾರ್ಥಕತೆಗಾಗಿ ದಾನ, ಧರ್ಮ, ಸಮಾಜೋಪಯೋಗಿ ಕಾರ್ಯಗಳಿಗೆ ಕೈಜೋಡಿಸಿ ಎಂದರು.

ಮಾಜಿ ಶಾಸಕರಾದ ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ತಹಸೀಲ್ದಾರ ವಿ.ಎಂ. ಮುಳಗುಂದ, ಎಸ್.ಪಿ. ಮುಳಗುಂದ, ಗುರು ಕೊಟ್ಟೂರೇಶ್ವರ ದೇವಸ್ಥಾನ ಸಮಿತಿ ಅಧ್ಯಕ್ಷ ಮಹಾದೇವಪ್ಪ ಬೆಳವಗಿ, ದೇವಿಂದ್ರಪ್ಪ ಗುಲಗಂಜಿ, ಸುಭಾಸ ಹುಲಗೂರ, ಡಾ. ವಿನೋದ ಹೊನ್ನಿಕೊಪ್ಪ, ಡಾ. ಪಿ.ಪಿ. ಶಿರಹಟ್ಟಿ, ಫಕ್ಕೀರೇಶಪ್ಪ ಕಾಳಪ್ಪನವರ, ಕೇಶವ ಗುಲಗಂಜಿ, ಶಿವಾನಂದಯ್ಯ ಶಂಕಿನಮಠ, ರಾಮಣ್ಣ ಲಮಾಣಿ (ಶಿಗ್ಲಿ) ಸೇರಿದಂತೆ ಗ್ರಾ.ಪಂ ಅಧ್ಯಕ್ಷರು, ಸರ್ವ ಸದಸ್ಯರು, ಗುರು-ಹಿರಿಯರು ಇದ್ದರು.

ಬನ್ನಿಕೊಪ್ಪ/ಮೈಸೂರಿನ ಜಪದಕಟ್ಟಿಮಠದ ಡಾ. ಸುಜ್ಞಾನದೇವ ಶಿವಾಚಾರ್ಯರು ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಮಾಡಿ, ಅಧ್ಯಕ್ಷತೆ ವಹಿಸಿ ಆಶೀರ್ವಚನ ನೀಡಿದರು. ನೇತೃತ್ವ ವಹಿಸಿದ್ದ ಹೂವಿನಶಿಗ್ಲಿ ಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು, ಬೆಳ್ಳಟ್ಟಿಯ ಬಸವರಾಜ ಮಹಾಸ್ವಾಮಿಗಳು ಕಳಸಾರೋಹಣ ನೆರವೇರಿಸಿ ಆಶೀರ್ವಚನ ನೀಡಿದರು. ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ ಧರ್ಮಸಭೆ ಉದ್ಘಾಟಿಸಿ ಮಾತನಾಡಿದರು.

# ಕನ್ನಿಕಾಪರಮೇಶ್ವರಿ ಪಾರ್ವತಿಯ ಅಂಶದವಳು



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕನ್ನಿಕಾಪರಮೇಶ್ವರಿಯು ಪಾರ್ವತಿ ದೇವಿಯ ಅಂಶವಾಗಿದ್ದು, ಆರ್ಯವೈಶ್ಯ ಸಮಾಜದ ಪ್ರಮುಖ ದೇವತೆಯಾಗಿದ್ದಾಳೆ. ಭಕ್ತರ ಅಭೀಷ್ಟೆಗಳನ್ನು ನೆರವೇರಿಸುವಲ್ಲಿ ಯಾವಾಗಲೂ ಮುಂದಾಗಿರುವ ಈ ದೇವತೆಯನ್ನು ಪೂಜಿಸುವುದರಿಂದ ನಮ್ಮ ಬಯಕೆಗಳು ಈಡೇರುತ್ತವೆ ಎಂದು ನರೇಗಲ್ಲ ಆರ್ಯವೈಶ್ಯ ಸಮಾಜದ ಅಧ್ಯಕ್ಷ ರಾಮಣ್ಣ ನವಲಿ ಹೇಳಿದರು.

ಪಟ್ಟಣದಲ್ಲಿ ನೂತನವಾಗಿ ನಿರ್ಮಾಣಗೊಂಡ ಕನ್ನಿಕಾ ಪರಮೇಶ್ವರಿ ದೇವಸ್ಥಾನದಲ್ಲಿ ಆಚರಿಸಲಾದ ಕನ್ನಿಕಾ ಪರಮೇಶ್ವರಿ ಜಯಂತಿಯಲ್ಲಿ ಅವರು ಮಾತನಾಡಿದರು.

ನರೇಗಲ್ಲ ಪಟ್ಟಣದಲ್ಲಿ ಆರ್ಯವೈಶ್ಯ ಸಮಾಜದ ಕೆಲವೇ ಕೆಲವು ಕುಟುಂಬಗಳಿದ್ದರೂ ಇಲ್ಲಿಯೂ ಒಂದು ದೇವಸ್ಥಾನವನ್ನು ನಿರ್ಮಿಸಬೇಕೆಂಬುದು ನಮ್ಮೆಲ್ಲರ ಕನಸಾಗಿತ್ತು. ದೇವಿ ಕನ್ನಿಕಾಪರಮೇಶ್ವರಿಯ ಆಶೀರ್ವಾದ ಮತ್ತು ಸಮಾಜದ ಎಲ್ಲ ಜನತೆಯ ಸಹಕಾರದಿಂದ ಈ ಭವ್ಯವಾದ ದೇವಸ್ಥಾನ ನಿರ್ಮಾಣವಾಗಿದೆ ಎಂದರು.

ಶ್ರೀ ಕನ್ನಿಕಾ ಪರಮೇಶ್ವರಿಯ ಮೂರ್ತಿಯನ್ನು ಪಲ್ಲಕ್ಕಿಯಲ್ಲಿರಿಸಿ ಡೊಳ್ಳು, ಭಾಜಾಭಜಂತ್ರಿ ಮೂಲಕ ಗ್ರಾಮಪ್ರದಕ್ಷಿಣೆ ಮಾಡಲಾಯಿತು. ದೇವಸ್ಥಾನದಿಂದ ಹೊರಟ ಮೆರವಣಿಗೆಯು ಪಟ್ಟಣದ ಪ್ರಮುಖ ಬೀದಿಗಳ ಮೂಲಕ ಸಂಚರಿಸಿ ಮರಳಿ ದೇವಸ್ಥಾನಕ್ಕೆ ಬಂದು ತಲುಪಿತು.

ಚಂದ್ರಹಾಸ ಇಲ್ಲೂರ, ಅಶೋಕ ನವಲಿ, ರಾಮಚಂದ್ರ ಬೆಟದೂರ, ಮಹೇಶ ನವಲಿ, ಮಂಜುನಾಥ ನವಲಿ, ಚಂದ್ರಹಾಸ ಇಂಗಳಹಳ್ಳಿ, ಮನೋಹರ ಗುಡಿಸಾಗರ, ನಾಗೇಶ ಗುಡಿಸಾಗರ, ಮುತ್ತುರಾಜ ದೇವರಂಗಡಿ, ವೆಂಕಟೇಶ ಕಣಿವಿಹಳ್ಳಿ, ಅಮಿತ ದೇವರಂಗಡಿ, ಈರಣ್ಣ ಇಲ್ಲೂರ, ಸುರೇಶ ನವಲಿ ಮುಂತಾದವರು ಉಪಸ್ಥಿತರಿದ್ದರು.

# ತೋಂಟದ ಸಿದ್ಧಲಿಂಗ ಶ್ರೀಗಳ ಕಂಚಿನ ಪುತ್ಥಳಿ ಸ್ಥಾಪನೆ



■ವಿಜಯಸಾಕ್ಷಿ ಸುದ್ದಿ, ಚಿಂಚೋಳಿ

ಕರ್ನಾಟಕ-ಮಹಾರಾಷ್ಟ್ರ ಗಡಿಭಾಗವಾದ ಆಳಂದ ಸಮೀಪದ ಖಜೂರಿಯಲ್ಲಿ ಈಗಾಗಲೇ ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಬೃಹತ್ ಅನುಭವಮಂಟಪ ಮತ್ತು ಪ್ರಾಥಮಿಕ, ಪ್ರೌಢಶಾಲೆಯನ್ನು ಗದಗ ಶ್ರೀ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದಿಂದ ಸ್ಥಾಪಿಸಲಾಗಿದೆ.

ಈಗ ಕರ್ನಾಟಕ-ಆಂಧ್ರದ ಗಡಿಭಾಗವಾದ ಚಿಂಚೋಳಿ ತಾಲೂಕ ರುದ್ನೂರಿನಲ್ಲಿ ಪೂಜ್ಯ ಲಿಂಗೈಕ್ಯ ಶ್ರೀ ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರ ಪಂಚಲೋಹದ ಪುತ್ಥಳಿ ಹಾಗೂ ಶಿಲಾ ಮಂಟಪವನ್ನು ಅಲ್ಲಿಯ ಭಕ್ತರು 15 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಿದ್ದಾರೆ. ನಾಗಮಂಗಲದಿಂದ ಈ ಪುತ್ಥಳಿಯನ್ನು ದಿ.08ರಂದು ಎಡೆಯೂರಿನ ಶ್ರೀ ಸ್ವಾಮಿ ಕ್ಷೇತ್ರದಲ್ಲಿ ಸ್ವಾಗತಿಸಿ, ಪೂಜಿಸಿ, ರುದ್ನೂರಿಗೆ ಕಳುಹಿಸಲಾಯಿತು. ಈ ಸ್ವಾಗತ ಕಾರ್ಯಕ್ರಮದಲ್ಲಿ ಎಡೆಯೂರಿನ ಹಿರಿಯರಾದ ಶ್ರೀ ಕೃಷ್ಣೇಗೌಡರು, ಅರ್ಚಕರು, ಕ್ಷೇತ್ರದ ದಾಸೋಹದ ಸಿಬ್ಬಂದಿಯವರು, ಎಡೆಯೂರಿನ ಹಿರಿಯರು ಹಾಗೂ ರುದ್ನೂರ ಭಕ್ತರಾದ ಶ್ರೀ ಶಿವರಾಜಗೌಡರು ಪಾಟೀಲ, ಬೆಂಗಳೂರಿನ ಸಿ.ಪಿ.ಐ. ಪ್ರಕಾಶ ಪಾಟೀಲ, ಚಿಂಚೋಳಿಯ ಲಿಂಗಶೆಟ್ಟರು, ನಾಗೇಂದ್ರಪ್ಪ ಮುಂತಾದವರು ಭಾಗವಹಿಸಿದ್ದರು ಎಂದು ಎಡೆಯೂರು ವ್ಯವಸ್ಥಾಪನಾ ಸಮಿತಿ ಸದಸ್ಯರಾದ ಪ್ರೊ. ಶಿವಾನಂದ ಪಟ್ಟಣಶೆಟ್ಟರ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ಭಾರತೀಯ ಸೇನಾ ಕಾರ್ಯಕ್ಕೆ ನಮನ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಆಪರೇಷನ್ ಸಿಂಧೂರ್ ಘೋಷಣೆಯಡಿ ಭಯೋತ್ಪಾದನೆಯ ವಿರುದ್ಧ ದೃಢ ನಿಲುವು ತೆಗೆದು-ಕೊಂಡು ಉಗ್ರಗಾಮಿಗಳ ನೆಲೆಗಳ ಮೇಲೆ ದಾಳಿಗೈದ ಭಾರತೀಯ ಸೇನೆಗೆ ಅಂಜುಮನ್ ಇಸ್ಲಾಂ ಕಮಿಟಿ ಮಾಜಿ ಕಾರ್ಯದರ್ಶಿ ದಾವಲಸಾಬ ತಾಳಿಕೋಟಿ ಅಭಿನಂದನೆ ಸಲ್ಲಿಸಿದ್ದಾರೆ.



ಈ ಕುರಿತು ಪ್ರಕಟಣೆ ನೀಡಿರುವ ಅವರು, ಪಹಲ್ಗಾಮ್‌ನಲ್ಲಿ ಅಮಾಯಕ ನಾಗರಿಕರನ್ನು ಕ್ರೂರವಾಗಿ ಹತ್ಯೆಗೈದ ಈ ಘೋರ ಕೃತ್ಯಕ್ಕೆ ಭಾರತೀಯ ಸೇನೆ ಆಪರೇಷನ್ ಸಿಂಧೂರು ಮೂಲಕ ತಕ್ಕ ಪಾಠ ಕಲಿಸಲು ಮುಂದಾಗಿದೆ. ಈ ಕಾರ್ಯಾಚರಣೆಯು ನಮ್ಮ ಸಶಸ್ತ್ರ ಪಡೆಗಳ ಧೈರ್ಯ ಮತ್ತು ದಕ್ಷತೆಗೆ ಸಾಕ್ಷಿಯಾಗಿದೆ. ಧಾರ್ಮಿಕ ಭಯೋತ್ಪಾದನೆ, ಕೋಮುವಾದ ಮತ್ತು ನಮ್ಮ ರಾಷ್ಟ್ರವನ್ನು ಅಸ್ಥಿರಗೊಳಿಸಲು ಪ್ರಯತ್ನಿಸುವ ವಿಭಜಕ ಶಕ್ತಿಗಳ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳುತ್ತೇವೆ ಎಂಬ ಸ್ಪಷ್ಟ ಸಂದೇಶವನ್ನು ನೀಡಿದೆ. ತ್ಯಾಗ ಮತ್ತು ಪ್ರತಿರೋಧದ ಪರಂಪರೆಯೊಂದಿಗೆ, ನಮ್ಮ ದೇಶದ ಏಕತೆಯನ್ನು ಮುರಿಯುಲು ಪ್ರಯತ್ನಿಸುವ ಶಕ್ತಿಗಳಿಗೆ ತಕ್ಕ ಉತ್ತರ ನೀಡಿದೆ ಎಂದು ಅವರು ತಿಳಿಸಿದ್ದಾರೆ.

# 'ವಚನ ವೈಭವ' ಪ್ರಶಸ್ತಿ ಪ್ರದಾನ




■ವಿಜಯಸಾಕ್ಷಿ ಸುದ್ದಿ, ಗದಗ

ಧಾರವಾಡ ನಗರದ ಚೇತನ್ ಫೌಂಡೇಶನ್ ವತಿಯಿಂದ ಕೊಡಮಾಡುವ 'ವಚನ ವೈಭವ' ಎಂಬ ಪ್ರಶಸ್ತಿಯನ್ನು ಪುಟ್ಟರಾಜ ಹಿರೇಮಠ, ಡಾ. ಎಸ್.ಎಸ್. ರೆಡ್ಡರ ಹಾಗೂ ಡಾ. ಶಿವಾನಂದ ವೀರಯ್ಯ ಹಿರೇಮಠರಿಗೆ ನೀಡಿ ಗೌರವಿಸಲಾಯಿತು. ಇತ್ತೀಚೆಗೆ ನಡೆದ ಸಮಾರಂಭದಲ್ಲಿ ಬಸವರಾಜ ಭೂಸರಡ್ಡಿ, ಪೀರ್‌ಸಾಬ್ ನದಾಫ್, ಲಕ್ಕಮ್ಮನವರ್ ಪ್ರಶಸ್ತಿಯನ್ನು ನೀಡಿ ಗೌರವಿಸಿದರು ಎಂದು ಚೇತನ್ ಫೌಂಡೇಶನ್ ಅಧ್ಯಕ್ಷರಾದ ಚಂದ್ರಶೇಖರ್ ಮಂಡಲಗಿರಿ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿಶ್ವ ರೆಡ್ ಕ್ರಾಸ್ ದಿನಾಚರಣೆ ಅಂಗವಾಗಿ ನಡೆದ ಕಾರ್ಯಕ್ರಮದಲ್ಲಿ ಪ್ರೊ. ಬೇಲೂರ ಅಭಿಪ್ರಾಯ

# ಮಾನವಿಯತೆಯೆಡೆಗೆ ರೆಡ್ ಕ್ರಾಸ್ ಸಂಸ್ಥೆ

■ವಿಜಯಸಾಕ್ಷಿ ಸುದ್ದಿ, ಗದಗ

ಮಾನವೀಯ ಗುಣಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಂಡರೆ ಮಾತ್ರ ಉತ್ತಮ ಮಾನವನಾಗಲು ಸಾಧ್ಯ ಎಂದು ಪ್ರೊ. ಕೆ.ಎಚ್. ಬೇಲೂರ ಅಭಿಪ್ರಾಯಪಟ್ಟರು.

ಭಾರತೀಯ ರೆಡ್ ಕ್ರಾಸ್ ಭವನದಲ್ಲಿ ಗುರುವಾರ ನಡೆದ ವಿಶ್ವ ರೆಡ್ ಕ್ರಾಸ್ ದಿನಾಚರಣೆ ಅಂಗವಾಗಿ ನಡೆದ ಕಾರ್ಯಕ್ರಮದಲ್ಲಿ ಅವರು ಉಪನ್ಯಾಸ ನೀಡಿದರು.

ಅತಿಥಿಗಳಾಗಿ ಆಗಮಿಸಿದ ನಗರದ ಖ್ಯಾತ ಹೃದಯ ರೋಗ ತಜ್ಞರಾದ ಡಾ. ವಿ.ಎಸ್. ಹೊಸಮಠ ವಿಶ್ವ ಆರೋಗ್ಯ ದಿನಾಚರಣೆ ಅಂಗವಾಗಿ ಉತ್ತಮ ಆರೋಗ್ಯದ ಬಗ್ಗೆ ಉಪನ್ಯಾಸ ನೀಡಿದರು. ರವಿ ಮೂಲಿಮನಿ ಸೇವಾ ಮನೋಭಾವನೆ ಹೊಂದಿದ ರೆಡ್ ಕ್ರಾಸ್ ಸಂಸ್ಥೆ ಮಾಡುತ್ತಿರುವ ಕಾರ್ಯಗಳನ್ನು ಶ್ಲಾಘಿಸಿದರು.



ಕಾರ್ಯಕ್ರಮದಲ್ಲಿ ಡಾ. ವಿ.ಎಸ್. ಹೊಸಮಠ, ರವಿ ಮೂಲಿಮನಿ, ಪ್ರೊ. ಕೆ.ಎಚ್. ಬೇಲೂರ, ಡಾ. ಬಿ.ಎಮ್. ಆಲೂರರನ್ನು ಸನ್ಮಾನಿಸಲಾಯಿತು. ಸಂಸ್ಥೆಯ ವತಿಯಿಂದ 10 ಪದವಿಪೂರ್ವ ಹಾಗೂ ಪದವಿ ಕಾಲೇಜುಗಳಿಗೆ ತಲಾ 5 ಪ್ರಥಮ ಚಿಕಿತ್ಸಾ ಪೆಟ್ಟಿಗೆಗಳನ್ನು ವಿತರಿಸಲಾಯಿತು. ರೆಡ್ ಕ್ರಾಸ್ ಸಂಸ್ಥೆಯ ಸಭಾಪತಿಗಳಾದ ಡಾ. ಆರ್.ಎನ್. ಗೋಡಬೊಲೆ ವಹಿಸಿದ್ದರು. ಸಂಸ್ಥೆಯ ಗೌರವ ಕಾರ್ಯದರ್ಶಿ ಡಾ. ಎಮ್.ಡಿ. ಸಮುದ್ರಿ ಸ್ವಾಗತಿಸಿದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಉಪಸಭಾಪತಿಗಳಾದ ನಾರಾಯಣಪ್ಪ ಇಲ್ಲೂರ ಭಾಗವಹಿಸಿದ್ದರು.

ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರದ ನೋಡಲ್ ಅಧಿಕಾರಿ ವರದಾ ಕೊಲಕಾರ ಜಿವಿಪು ಕೇಂದ್ರದ ಕಾರ್ಯಚಟುವಟಿಕೆಗಳ ಬಗ್ಗೆ ಮಾಹಿತಿ ನೀಡಿ ಸಲಕರಣೆ ವಿತರಣಾ ಕಾರ್ಯಕ್ರಮವನ್ನು ನಡೆಸಿಕೊಟ್ಟರು. ಜಿವಿಪು ಕೇಂದ್ರದ ಕ್ಲಿನಿಕಲ್ ಸೈಕಾಲಜಿಸ್ಟ್ ಪ್ರೀತಿ ಹೊಂಗಲ ಸನ್ಮಾನಿತರನ್ನು ಪರಿಚಯಿಸಿದರು.

ರೆಡ್ ಕ್ರಾಸ್ ಸಂಸ್ಥೆಯ ಆಡಳಿತ ಮಂಡಳಿಯ ಸದಸ್ಯರಾದ ಚನ್ನಾರೆಡ್ಡಿ ಗೂಳರೆಡ್ಡಿ, ಡಾ. ಪವನ ಹುಯಿಲಗೋಳ, ಅಶೋಕ ಬಾಗಮಾರ, ಗಣೇಶಸಿಂಗ್ ಬ್ಯಾಳಿ, ಡಾ. ಪವನ ಮಹೇಂದ್ರಕರ ಹಾಗೂ ಸದಸ್ಯರು ಭಾಗವಹಿಸಿದ್ದರು. ವಾಗ್ದೇವಿ ಕುಲಕರ್ಣಿ ಪ್ರಾರ್ಥಿಸಿ ಕಾರ್ಯಕ್ರಮ ನಿರೂಪಿಸಿದರು. ಫಿಸಿಯೋಥೆರಪಿಸ್ಟ್ ಡಾ. ಸಾಯಿಪ್ರಕಾಶ ಯರಗೇರಿ ವಂದಿಸಿದರು.

ಜಿವಿಪು ಕೇಂದ್ರದ ವರ್ಕ್‌ಶಾಪ್‌ನಲ್ಲಿ ಪಿ&ಓ ತಂತ್ರಜ್ಞರಾದ ತಸ್ಲಂಅಲಿ ಜಿ ಮುಲ್ಲಾ ಅವರು ತಯಾರಿಸಿದ ಕೃತಕ ಕಾಲನ್ನು ಫಲಾನುಭವಿಗೆ ಹಾಗೂ ಶಿವಯೋಗಿ ಬೆಳವಡಿ ಅವರು ತಯಾರಿಸಿದ ಸ್ಯಾಂಡಲ್ಸ್‌ಗಳನ್ನು 3 ಫಲಾನುಭವಿಗಳಿಗೆ, ಹ್ಯಾಂಡ್ ಸ್ಯಾಂಡಲ್ಸ್‌ಗಳನ್ನು 2 ಫಲಾನುಭವಿಗಳಿಗೆ, ವಕ್ರಪಾದ ಸ್ಯಾಂಡಲ್ಸ್‌ನ್ನು ಓರ್ವ ಫಲಾನುಭವಿಗೆ ವಿತರಿಸಲಾಯಿತು.

# ಹೆಮ್ಮೆಯ ಸೈನಿಕರಿಗೆ ಅಭಿನಂದನೆ

■ವಿಜಯಸಾಕ್ಷಿ ಸುದ್ದಿ, ಗದಗ

ಕಾಶ್ಮೀರದ ಪೆಹಲ್ಗಾಮ್‌ನಲ್ಲಿ ನಡೆದ ಹತ್ಯಾಕಾಂಡಕ್ಕೆ ಪ್ರತಿಯಾಗಿ ಕೇವಲ 15 ದಿನಗಳಲ್ಲಿ ಭಾರತ ಪ್ರತೀಕಾರ ತೀರಿಸಿಕೊಂಡಿದ್ದು, ಆಪರೇಷನ್ ಸಿಂಧೂರ್ ಹೆಸರಿನಲ್ಲಿ ಉಗ್ರರ 9 ತಾಣಗಳ ಮೇಲೆ ಕ್ಷಿಪಣಿ ದಾಳಿ ಮಾಡಿ ಉಗ್ರರನ್ನು ಧ್ವಂಸ ಮಾಡಿದ ದೇಶದ ಹೆಮ್ಮೆಯ ಸೈನಿಕರಿಗೆ ಜಿಲ್ಲಾ ಬಿಜೆಪಿ ವಕ್ತಾರ ಎಂ.ಎಂ. ಹಿರೇಮಠ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.



ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಪಾಕಿಸ್ತಾನವು ಊಹಿಸಿರದ ರೀತಿಯಲ್ಲಿ 80ಕ್ಕೂ ಹೆಚ್ಚು ಉಗ್ರರನ್ನು ಹೊಡೆದುರುಳಿಸಿದ ದೇಶದ ಸೇನಾಪಡೆ, ನೌಕಾಪಡೆ ಮತ್ತು ವಾಯು ಪಡೆಗಳು ಜಂಟಿಯಾಗಿ ಕಾರ್ಯನಿರ್ವಹಿಸಿರುವದು ಹೆಮ್ಮೆಯ ಸಂಗತಿ. ಪ್ರಧಾನಿ ನರೇಂದ್ರ ಮೋದಿಯವರು ಪ್ರಧಾನಿಯಾದ ನಂತರ ಪಾಕಿಸ್ತಾನದ ಮೇಲೆ ನಡೆಸಿದ 3ನೇ ದಾಳಿ ಇದಾಗಿದ್ದು, ಪೆಹಲ್ಗಾಮ್ ದಾಳಿಕೋರರ ಸದ್ದಡಿಗಿಸುತ್ತೇವೆ ಎಂದು ನೊಂದ 26 ಪ್ರವಾಸಿಗರ ಕುಟುಂಬಗಳಿಗೆ ಕೊಟ್ಟಿದ್ದ ಮಾತನ್ನು ಪ್ರಧಾನಿ ಮೋದಿಯವರು ಉಳಿಸಿಕೊಂಡಿದ್ದಾರೆ.

ಈ ಕಾರ್ಯಾಚರಣೆಯ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ, ರಕ್ಷಣಾ ಸಚಿವ ರಾಜನಾಥಸಿಂಗ್, ಗೃಹ ಸಚಿವ ಅಮಿತ್ ಶಾ, ಭದ್ರತಾ ಸಲಹೆಗಾರ ಅಜಿತ್ ಧೋವಲ್ ಹಾಗೂ ಎಲ್ಲ ರಕ್ಷಣಾ ಅಧಿಕಾರಿಗಳಿಗೂ ಎಂ.ಎಂ. ಹಿರೇಮಠ, ಸಹ ವಕ್ತಾರರಾದ ದತ್ತಣ್ಣ ಜೋಶಿ, ಮಾಧ್ಯಮ ಪ್ರಮುಖ ರಾಜು ಹೊಂಗಲ, ಸಹ ಪ್ರಮುಖ ಶ್ರೀನಿವಾಸ ಹುಬ್ಬಳ್ಳಿ, ಶಹರ ಅಧ್ಯಕ್ಷ ಸುರೇಶ ಮರಳಪ್ಪನವರ, ಗ್ರಾಮೀಣ ಅಧ್ಯಕ್ಷ ಬೂದಪ್ಪ ಹಳ್ಳಿ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.



ಧಾರವಾಡ ಜಿಲ್ಲೆ ಅಬಕಾರಿ ಇಲಾಖೆಯ ಅಬಕಾರಿ ಉಪ ಆಯುಕ್ತರ ಕಛೇರಿ ಮತ್ತು ವಲಯ ಕಛೇರಿಗಳಿಗೆ ಹೊಸದಾಗಿ ಹಂಚಿಕೆಯಾಗಿರುವ 6 ಹೊಸ ವಾಹನಗಳನ್ನು ಇಲಾಖೆಯ ದೈನಂದಿನ ಜಾರಿ ಮತ್ತು ತನಿಖಾ ಕಾರ್ಯಗಳಿಗಾಗಿ ಬಳಸಲು ಅಬಕಾರಿ ಸಚಿವ ಆರ್.ಬಿ. ತಿಮ್ಮಾಪೂರ ಅವರು ಅಬಕಾರಿ ಉಪ ಆಯುಕ್ತರ ಕಛೇರಿಯಲ್ಲಿ ಹಸಿರು ನಿಶಾನೆ ತೋರಿಸುವ ಮೂಲಕ ವಾಹನಗಳಿಗೆ ಚಾಲನೆ ನೀಡಿದರು ಎಂದು ಧಾರವಾಡ ಜಿಲ್ಲೆಯ ಅಬಕಾರಿ ಉಪ ಆಯುಕ್ತರಾದ ರಮೇಶ್‌ಕುಮಾರ್ ಹೆಚ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲೋಕಾಯುಕ್ತದಿಂದ ನಾಲ್ವರು ಸರ್ಕಾರಿ ಅಧಿಕಾರಿಗಳ ಮೇಲೆ ದಾಳಿ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ರಾಜ್ಯ ಲೋಕಾಯುಕ್ತ ಗುರುವಾರ ನಾಲ್ಕು ಜಿಲ್ಲೆಗಳ ನಾಲ್ವರು ಸರ್ಕಾರಿ ಅಧಿಕಾರಿಗಳ ಆಸ್ತಿಗಳ ಮೇಲೆ ಏಕಕಾಲದಲ್ಲಿ ದಾಳಿ ನಡೆಸಿದೆ. ಅಕ್ರಮ ಆಸ್ತಿ ಪ್ರಕರಣಗಳ ತನಿಖೆಯ ಭಾಗವಾಗಿ ನಡೆಸಲಾದ ಈ ಕಾರ್ಯಾಚರಣೆಯಲ್ಲಿ ಅಧಿಕಾರಿಗಳಿಗೆ ಸಂಬಂಧಿಸಿದ 10 ಕ್ಕೂ ಹೆಚ್ಚು ಸ್ಥಳಗಳಲ್ಲಿ ಶೋಧ ನಡೆಸಲಾಗಿದೆ ಎಂದು ವರದಿಯಾಗಿದೆ.

### ಸಂಪ್ರದಾಯದಂತೆ ಭಕ್ತರಿಂದ ಕಾಣಿಕೆ ಪಡೆಯುವ ವರ್ಷಾಸನೆ ಸ್ವೀಕರಿಸಿದ ಶ್ರೀ ಫಕೀರ ಸಿದ್ಧರಾಮ ಜಗದ್ಗುರುಗಳು

# ಸಕಲರೂ ಸಂತೃಪ್ತ ಜೀವನ ಸಾಗಿಸಲಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪ್ರತಿವರ್ಷ ಅಗಿಹುಣ್ಣಿಮೆ ದಿನ ಅಂದರೆ ಈ ವರ್ಷ ಮೇ 12ರಿಂದ 2 ದಿನಗಳ ಕಾಲ ನಡೆಯುವ ಶಿರಹಟ್ಟಿಯ ಶ್ರೀ ಫಕ್ಕೀರೇಶ್ವರ ಮಠದ ಜಾತ್ರಾ ಮಹೋತ್ಸವದ ಅಂಗವಾಗಿ ಗುರುವಾರ ಶಿರಹಟ್ಟಿ ಸಂಸ್ಥಾನ ಮಠದ ಶ್ರೀ ಫಕೀರ ಸಿದ್ಧರಾಮ ಜಗದ್ಗುರುಗಳು ಲಕ್ಷ್ಮೇಶ್ವರದ ಸೋಮೇಶ್ವರ ದೇವಸ್ಥಾನ, ದೂದಪೀರಾ ದರ್ಗಾಗಳಿಗೆ ಭೇಟಿ ನೀಡಿದರು. ಬಳಿಕ ಭಕ್ತರ ಮನೆಗೆ ಆಗಮಿಸಿ ಆಶೀರ್ವದಿಸಿ, ಭಕ್ತರಿಂದ ಕಾಣಿಕೆ ಪಡೆಯುವ ವರ್ಷಾಸನೆ ಸ್ವೀಕರಿಸುವ ಸಂಪ್ರದಾಯ ನೆರವೇರಿಸಿದರು.

ಹಿಂದ್ೂ–ವ್ುುಸ್ಲಿಂ ಭಾವೈಕ್ಯತೆಯ ಕೇಂದ್ರವಾಗಿರುವ ಶಿರಹಟ್ಟಿ ಫಕೀರೇಶ್ವರ ಮಠದಿಂದ ಜಾತ್ರಾ ಮುನ್ನಾದಿನ ಪಟ್ಟಣಕ್ಕೆ ವರ್ಷಾಸನೆಗೆ ಬರುವ ಸಾಂಪ್ರಯದಂತೆ ಶ್ರೀ ಫಕೀರ ಸಿದ್ಧರಾಮ ಜಗದ್ಗುರುಗಳು ಆನೆ, ಛತ್ರ, ಚಾಮರ ವಾದ್ಯಗಳೊಂದಿಗೆ ಮೆರವಣಿಗೆಯ ಮೂಲಕ ಭಕ್ತರ ಮನೆಗಳಿಗೆ ಭೇಟಿ ನೀಡಿ, ಕಾಣಿಕೆ, ಧವಸ–ಧಾನ್ಯಗಳನ್ನು ಸ್ವೀಕರಿಸಿ ಆಶೀರ್ವದಿಸಿ ಶ್ರೀಮಠದ ಜಾತ್ರೆಗೆ ಬರುವಂತೆ ಕೋರಿದರು.



ಈ ವೇಳೆ ಶುಭ ನುಡಿದ ಜ.ಫಕೀರ ಸಿದ್ಧರಾಮ ಮಹಾಸ್ವಾಮಿಗಳು, ಜಾತ್ರಾ ಮುನ್ನಾದಿನ ಪಟ್ಟಣದಲ್ಲಿ ವರ್ಷಾಸನೆ ಮಾಡುವುದು ಸಂಪ್ರದಾಯ ಮತ್ತು ಭಾವೈಕ್ಯತೆ ಸಂಕೇತದ ಮೆರವಣಿಗೆಯಾಗಿದೆ. ಈ ವರ್ಷ ಜಗತ್ತಿಗೆ ಸುಖ, ಶಾಂತಿ, ನೆಮ್ಮದಿ ದೊರಕಲಿ. ಸಮೃದ್ಧ ಮಳೆ ಬೆಳೆಯಾಗಿ ರೈತರು ಸೇರಿ ಸಕಲ ಜೀವರಾಶಿಗಳು ಸಂತೃಪ್ತ ಜೀವನ ಸಾಗಿಸಲಿ. ದ್ವೇಷ–ಅಸೂಯೆ ಅಳಿದು ಪ್ರೀತಿ–ಸ್ನೇಹ ಸಂವರ್ಧಿಸಲಿ ಎನ್ನುವ ಭಿನ್ನಹವನ್ನು ದೇವರಲ್ಲಿ ಸಮರ್ಪಿಸಿ ಜಾತ್ರೆ ನೆರವೇರಿಸೋಣ. ಈ ನಿಟ್ಟಿನಲ್ಲಿ ಮೇ 12ರಿಂದ ಜರುಗುವ ಶ್ರೀಮಠದ ಜಾತ್ರೆಯಲ್ಲಿ ಎಲ್ಲರೂ ಪಾಲ್ಗೊಂಡು ಫಕ್ಕೀರೇಶ್ವರರ ಕೃಪೆಗೆ ಪಾತ್ರರಾಗಬೇಕೆಂದು ಕೋರಿದರು.

ಈ ವೇಳೆ ಸೋಮೇಶ್ವರ ಭಕ್ತರ ಟ್ರಸ್ಟ್ ಅಧ್ಯಕ್ಷ ಗುರಣ್ಣ ಪಾಟೀಲಕುಲಕರ್ಣಿ, ಭಕ್ತರಾದ ಶಾಮಣ್ಣ ಗಾಂಜಿ, ಮಲ್ಲಿಕಾರ್ಜುನ ಮಹಾಂತಶೆಟ್ಟರ, ಗಂಗಾಧರಯ್ಯ ಫಕ್ಕೀರಸ್ವಾಮಿಮಠ, ಎಂ.ಕೆ. ಕಳ್ಳಿಮಠ, ಗಂಗಾಧರಯ್ಯ ಫಕ್ಕೀರಸ್ವಾಮಿಮಠ, ಜಗದೀಶ ಪಿಳ್ಳಿ, ಚಂಬಣ್ಣ ಬಾಳಿಕಾಯಿ, ಸುರೇಶ ರಾಚನಾಯ್ಕರ, ವಿರೂಪಾಕ್ಷ ಆದಿ, ಮಂಜುನಾಥ ಪಾಟೀಲ, ಎಂ.ಆರ್. ಬೆಳವಟಗಿ, ಶಿವಯೋಗಿ ಅಂಕಲಕೋಟಿ, ಎಂ.ಎಸ್. ಚಾಕಲಬ್ಬಿ, ರಾಘವೇಂದ್ರ ಪೂಜಾರ, ಜಗದೀಶ ಲಿಂಗಶೆಟ್ಟಿ, ಜಿ.ಎಸ್. ಗುಡಗೇರಿ, ಶಿವಾನಂದ ದೊಡ್ಡಮನಿ, ವೆಂಕಟೇಶ ಮಾತಾಡೆ, ಅಂಜುಮನ್ ಹಾಗೂ ದರ್ಗಾ ಕಮಿಟಿಯ ಮುಖಂಡರು ಸೇರಿ ಅಪಾರ ಭಕ್ತರು ಪಾಲ್ಗೊಂಡಿದ್ದರು.

ಪಟ್ಟಣದ ಶ್ರೀ ಫಕ್ಕೀರೇಶ್ವರ ಮಠದಿಂದ ಶ್ರೀ ಸೋಮೇಶ್ವರ ದೇವಸ್ಥಾನ, ದೂದಪೀರಾಂ ದರ್ಗಾಕ್ಕೆ ಶ್ರೀಗಳು ಭೇಟಿ ನೀಡಿದರು. ಪ್ರಮುಖ ಮಾರ್ಗದಲ್ಲಿ ಮೆರವಣಿಗೆ ಮೂಲಕ ಸಾಗಿದರು. ಈ ವೇಳೆ ಭಕ್ತರು ಕಾಣಿಕೆ, ದವಸ ಧಾನ್ಯಗಳನ್ನು ನೀಡಿ ಶ್ರೀಗಳ ಆಶೀರ್ವಾದ ಪಡೆದುಕೊಂಡು ಜಗದ್ಗುರುಗಳಿಗೆ ಜಯಘೋಷಗಳನ್ನು ಕೂಗಿದರು.

# ಸಾಧಕ ವಿದ್ಯಾರ್ಥಿನಿ ಸನಾಳಿಗೆ ಸನ್ಮಾನ



**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಸ್ಟುಡೆಂಟ್ಸ್ ಎಜುಕೇಶನ್ ಸಂಸ್ಥೆಯ ಸನ್ಮಾರ್ಗ ಪದವಿಪೂರ್ವ ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ದ್ವಿತೀಯ ಪಿ.ಯು ವಾಣಿಜ್ಯ ವಿಭಾಗದ ಸನಾ ನರೇಗಲ್ ಪ್ರಸಕ್ತ ಸಾಲಿನ ದ್ವಿತೀಯ ಪಿ.ಯು ಪರೀಕ್ಷೆಯಲ್ಲಿ ಶೇ. 98.33 ಅಂಕಗಳನ್ನು ಪಡೆದು ರಾಜ್ಯಕ್ಕೆ 10ನೇ ರ್‍ಯಾಂಕ್ ಹಾಗೂ ಗದಗ ಜಿಲ್ಲೆಗೆ ದ್ವಿತೀಯ ರ್‍ಯಾಂಕನ್ನು ಗಳಿಸಿ ಕಾಲೇಜಿನ ಕೀರ್ತಿ ಹೆಚ್ಚಿಸಿದ ಹಿನ್ನೆಲೆಯಲ್ಲಿ ವಿದ್ಯಾರ್ಥಿನಿಯ ಸ್ವಗೃಹದಲ್ಲಿ ಆಡಳಿತ ಮಂಡಳಿಯ ಸದಸ್ಯರಾದ ಪ್ರೊ. ಸೈಯ್ಯದ್ ಮತೀನ್ ಮುಲ್ಲಾ, ಪ್ರೊ. ಉಡುಪಿ ದೇಶಪಾಂಡೆ, ಪ್ರಾಚಾರ್ಯರಾದ ಪ್ರೊ. ಪ್ರೇಮಾನಂದ ರೋಣದ ಹಾಗೂ ವಾಣಿಜ್ಯ ವಿಭಾಗದ ಪ್ರೊ. ಪರಶುರಾಮ ಕೊಟ್ನಿಕಲ್, ಪ್ರೊ. ಶಿವಕುಮಾರ ವಜ್ರಬಂಡಿ, ಪ್ರೊ. ಸಂಗೀತಾ ಬೀಳಗಿ ಸನ್ಮಾನಿಸಿದರು.

ಸಂಸ್ಥೆಯ ಚೇರಮನ್ ಪ್ರೊ. ರಾಜೇಶ ಕುಲಕರ್ಣಿ, ಆಡಳಿತ ಮಂಡಳಿಯ ಸದಸ್ಯರಾದ ಪ್ರೊ. ರೋಹಿತ ಒಡೆಯರ್ ಹಾಗೂ ರಾಹುಲ್ ಒಡೆಯರ್, ಆಡಳಿತಾಧಿಕಾರಿಗಳಾದ ಎಂ.ಸಿ. ಹಿರೇಮಠ ಹಾಗೂ ಕಾಲೇಜಿನ ಸಮಸ್ತ ಬೋಧಕ–ಬೋಧಕೇತರ ಸಿಬ್ಬಂದಿಗಳು ಸಾಧಕ ವಿದ್ಯಾರ್ಥಿನಿಗೆ ಅಭಿನಂದನೆ ತಿಳಿಸಿದ್ದಾರೆ.

# ದೇಶದ ಹಿರಿಮೆಯನ್ನು ಹೆಚ್ಚಿಸಿದ 'ಆಪರೇಷನ್ ಸಿಂಧೂರ'

▶▶ಮೊದಲನೇ ಪುಟದಿಂದ

ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ಯುದ್ಧ ನಡೆದಾಗ ಜಿಲ್ಲಾಡಳಿತ ನೀಡುವ ಮಾರ್ಗಸೂಚಿಗಳನ್ನು ಪಾಲಿಸಬೇಕು. ಯಾವುದೇ ಕಾರಣಕ್ಕೂ ದೇಶದ ಆಂತರಿಕ ಮಾಹಿತಿ ಸೋರಿಕೆಯಾಗದಂತೆ ನೋಡಿಕೊಳ್ಳುವುದು ಜನರ ಕರ್ತವ್ಯವಾಗಿದೆ ಎಂದು ನಿರ್ದೇಶನ ನೀಡಿದರು.

ಕರ್ನಲ್ ಭುವನ್ ಕರೆ ಮಾತನಾಡಿ, ನಾವು ಈ ಹಿಂದೆ ಯುದ್ಧ ನಡೆದ ಸಂದರ್ಭದಲ್ಲಿ ಮಾಹಿತಿಯ ಸೋರಿಕೆಯಿಂದ ಎದುರಾಳಿಯನ್ನು ಎದುರಿಸಲು ಕಷ್ಟವಾಗಿತ್ತು. ಹಾಗಾಗಿ ದೇಶದ ಆಂತರಿಕ ಮಾಹಿತಿಯನ್ನು ನಾಗರಿಕರು ಯಾವುದೇ ರೀತಿಯಲ್ಲಿ ಹಂಚಿಕೊಳ್ಳದಂತೆ ಗೌಪ್ಯತೆ ಕಾಪಾಡಿಕೊಳ್ಳಬೇಕು.

ಗಾಳಿ ಸುದ್ದಿ, ಸುಳ್ಳು ಸುದ್ದಿ–ವದಂತಿಗಳಿಗೆ ಜನರು ಕಿವಿಗೊಡಬಾರದು. ಯಾವುದೇ ವಿಷಯವಿದ್ದರೂ ಅದರ ಸತ್ಯಾಂಶ ಅರಿಯಬೇಕು ಎಂದು ಹೇಳಿದರು.

ಕರ್ನಾಟಕ ರಾಜ್ಯ ಮಾಜಿ ಸೈನಿಕರ ಸಂಘದ ಅಧ್ಯಕ್ಷ ಬಸಲಿಂಗಪ್ಪ ಮುಂಡರಗಿ ಮಾತನಾಡಿ, ಹಾಲಿ ಸೈನಿಕರ ಕುಟುಂಬಕ್ಕೆ ನಾವು ಧೈರ್ಯ ತುಂಬೋಣ. ಅಗತ್ಯವಿದ್ದಲ್ಲಿ ನಾವೂ ಯುದ್ಧದಲ್ಲಿ ಹೋರಾಡಲು ಸದಾ ಸಿದ್ಧರೆಂದು ಸಭೆಗೆ ತಿಳಿಸಿದರು.

ಮಾಜಿ ಶಾಸಕ ಡಿ.ಆರ್. ಪಾಟೀಲ ಹಾಗೂ ಆರ್.ಡಿ.ಪಿ.ಆರ್ ವಿಶ್ವವಿದ್ಯಾಲಯದ ಕುಲಪತಿ ಸುರೇಶ ನಾಡಗೌಡರ ಮಾತನಾಡಿದರು. ಈ ಸಂದರ್ಭದಲ್ಲಿ ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಬಿ. ಅಸೂಟಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು, ಮಾಜಿ ಸೈನಿಕರುಗಳು, ಪೊಲೀಸ್ ಪಡೆಗಳು, ಎನ್‌ಸಿಸಿ, ಎನ್‌ಎಸ್‌ಎಸ್, ಹೋಮ್ ಗಾರ್ಡ್ಸ್ ಹಾಜರಿದ್ದರು.

# ಬಿಜೆಪಿ ವತಿಯಿಂದ ಇಂದು ವಿಶೇಷ ಪೂಜೆ

**■ವಿಜಯಸಾಕ್ಷಿ ಸುದ್ದಿ, ಗದಗ**

'ಆಪರೇಷನ್ ಸಿಂಧೂರ' ಹೆಸರಿನಲ್ಲಿ ಯಶಸ್ವಿ ಕಾರ್ಯಾಚರಣೆ ನಡೆಸಿದ ಭಾರತೀಯ ಸೇನೆಗೆ ದೇಶದಾದ್ಯಂತ ಅಭಿನಂದನೆಗಳ ಮಹಾಪೂರ ಹರಿದುಬರುತ್ತಿದೆ. ಪಹಲ್ಗಾಮ್‌ನಲ್ಲಿ ಅಮಾಯಕರ ಹತ್ಯೆ ಖಂಡಿಸಿ ಅದರ ಪ್ರತೀಕಾರಕ್ಕಾಗಿ ಪಾಕಿಸ್ತಾನದ ಉಗ್ರ ನೆಲೆಗಳ ಮೇಲೆ ದಾಳಿ ಮಾಡಿ ಯಶಸ್ಸು ಕಂಡಿರುವ ನಮ್ಮ ಸೈನಿಕರಿಗೆ ಇನ್ನೂ ಹೆಚ್ಚಿನ ಯಶಸ್ಸು, ಆರೋಗ್ಯ, ಆಯುಷ್ಯ ಲಭಿಸಲೆಂದು ಭಾರತೀಯ ಜನತಾ ಪಾರ್ಟಿ ವತಿಯಿಂದ ಗದಗ ನಗರದ ಕಿಲ್ಲಾ ಓಣಿಯ ಜೋಡ ದೇವಸ್ಥಾನದಲ್ಲಿ ಮೇ. 9ರಂದು ಬೆಳಿಗ್ಗೆ 8.30 ಗಂಟೆಗೆ ವಿಶೇಷ ಪೂಜೆ ಸಲ್ಲಿಸಲಾಗುವದು.

ದೇಶಭಕ್ತರು ಈ ಕಾರ್ಯಕ್ರಮಕ್ಕೆ ಆಗಮಿಸಿ ವಿಶೇಷ ಪೂಜಾ ಕಾರ್ಯದಲ್ಲಿ ಪಾಲ್ಗೊಳ್ಳಬೇಕೆಂದು ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ಪತ್ರಿಕಾ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

# 12–15 ಸ್ಥಾನಗಳಲ್ಲಿ ಸ್ಪರ್ಧಿಸಲು ಜೆಎಂಎಂ ಸಿದ್ಧತೆ

**■ವಿಜಯಸಾಕ್ಷಿ ಸುದ್ದಿ, ಬಿಹಾರ**

ಮುಂಬರುವ ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಜಾರ್ಖಂಡ್ ಮುಕ್ತಿ ಮೋರ್ಚಾ (ಜೆಎಂಎಂ) 12 15 ಸ್ಥಾನಗಳಲ್ಲಿ ಸ್ಪರ್ಧಿಸಲು ಸಿದ್ಧತೆ ನಡೆಸುತ್ತಿದೆ ಎಂದು ಪಕ್ಷದ ಪ್ರಧಾನ ಕಾರ್ಯದರ್ಶಿ ಮತ್ತು ವಕ್ತಾರ ವಿನೋದ್ ಕುಮಾರ್ ಪಾಂಡೆ ಗುರುವಾರ ತಿಳಿಸಿದ್ದಾರೆ ಎಂದು ಡೆಕ್ಕನ್ ಹೆರಾಲ್ಡ್ ವರದಿ ಮಾಡಿದೆ. ಬಿಹಾರ ಚುನಾವಣೆ

ಆದಾಗ್ಯೂ, ಪಕ್ಷವು ತನ್ನ ಇಂಡಿಯಾ ಮೈತ್ರಿಯ ಪಕ್ಷಗಳೊಂದಿಗೆ ಚರ್ಚಿಸಿದ ನಂತರ ಅಂತಿಮ ನಿರ್ಧಾರ ತೆಗೆದುಕೊಳ್ಳುತ್ತದೆ ಎಂದು



ಜೆಎಂಎಂ ನಾಯಕ ಹೇಳಿದ್ದಾರೆ ಎಂದು ವರದಿ ಹೇಳಿದೆ.

"ಮುಂಬರುವ ಬಿಹಾರ ಚುನಾವಣೆಯಲ್ಲಿ ಸ್ಪರ್ಧಿಸಲು ನಾವು ನಿರ್ಧರಿಸಿದ್ದೇವೆ ಮತ್ತು 12 ರಿಂದ 15 ಸ್ಥಾನಗಳಲ್ಲಿ ಅಭ್ಯರ್ಥಿಗಳನ್ನು ಕಣಕ್ಕಿಳಿಸಲು ಸಿದ್ಧತೆ ನಡೆಸುತ್ತಿದ್ದೇವೆ. ನಮ್ಮ ಇಂಡಿಯಾ ಮೈತ್ರಿಯ ಪಾಲುದಾರರೊಂದಿಗೆ ಸಮಾಲೋಚನೆಯ ನಂತರ ಸ್ಥಾನಗಳ ಸಂಖ್ಯೆಯ ಕುರಿತು ಅಂತಿಮ ನಿರ್ಧಾರವನ್ನು ಘೋಷಿಸಲಾಗುವುದು" ಎಂದು ವಿನೋದ್ ಕುಮಾರ್ ಪಾಂಡೆ ಪತ್ರಿಕಾಗೋಷ್ಠಿಯಲ್ಲಿ ಹೇಳಿದ್ದರೆ.

ಚುನಾವಣೆಗೆ ತಯಾರಿ ನಡೆಸಲು ಬಿಹಾರದಲ್ಲಿ ಪಕ್ಷದ ಘಟಕಗಳು ಸಕ್ರಿಯವಾಗಿ ತೊಡಗಿಸಿಕೊಂಡಿವೆ ಮತ್ತು ಅವರೊಂದಿಗೆ ಚರ್ಚೆಗಳು ನಡೆಯುತ್ತಿವೆ ಎಂದು ಅವರು ಹೇಳಿದ್ದಾರೆ.

### ವಿದ್ಯಾಮಂದಿರ ಪ್ರೌಢಶಾಲೆಯ ಹಳೆಯ ವಿದ್ಯಾರ್ಥಿಗಳಿಂದ ಗುರುವಂದನೆ

# ಯಾವ ವಿದ್ಯಾರ್ಥಿಯನ್ನೂ ದಡ್ಡನೆಂದು ಭಾವಿಸದಿರಿ

**■ವಿಜಯಸಾಕ್ಷಿ ಸುದ್ದಿ, ಬೆಳಗಾವಿ**

ಇಲ್ಲಿನ ನೇಸರಗಿ ಗ್ರಾಮದ ವಿದ್ಯಾಮಂದಿರ ಪ್ರೌಢಶಾಲೆಯಲ್ಲಿ ಇತ್ತೀಚೆಗೆ 1989–90ನೇ ಸಾಲಿನ ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳು ಗುರುವಂದನೆ ಮತ್ತು 4ನೇ ವರ್ಷದ ಸ್ನೇಹಕೂಟವನ್ನು ಆಯೋಜಿಸಿದ್ದರು.

ಕಾರ್ಯಕ್ರಮವನ್ನು ನೇಸರಗಿ ಮಲ್ಲಾಪೂರ ಶ್ರೀ ಗಾಳೇಶ್ವರ ಮಠದ ಶ್ರೀ ಚಿದಾನಂದ ಮಹಾಸ್ವಾಮಿಗಳು, ಹಿರಿಯ ನಿವೃತ್ತ ಶಿಕ್ಷಕರಾದ ಜಿ.ಆರ್. ಕುಲಕರ್ಣಿ, ಸಿ.ಪ್ಪಿ. ಕಟ್ಟಿಮನಿ, ವಿದ್ಯಾಮಂದಿರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಫಾ. ಹ್ಯಾರಿ ವಿಕ್ಟರ್ ದಿಕ್ರುಜ್ ಉದ್ಘಾಟಿಸಿದರು. ನಿವೃತ್ತ ಶಿಕ್ಷಕ ಸಿ.ಪ್ಪಿ. ಕಟ್ಟಿಮನಿ ಮಾತನಾಡಿ, ವಿದ್ಯಾರ್ಥಿಗಳು ಎಷ್ಟೇ ದೊಡ್ಡವರಾದರೂ ಶಿಕ್ಷಕರಿಗೆ ಕೊಡುವಷ್ಟು ಗೌರವ ಯಾರಿಗೂ ಕೊಡುವದಿಲ್ಲ. ನಿಮ್ಮ ಮಕ್ಕಳ ಮೂಲಕ ನಿಮ್ಮ ಕನಸುಗಳನ್ನು ಸಾಕಾರಗೊಳಿಸಲು ಪ್ರಯತ್ನಿಸಿ ಎಂದರು.



ವಿದ್ಯಾಮಂದಿರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಫಾ. ಹ್ಯಾರಿ ವಿಕ್ಟರ್ ದಿಕ್ರುಜ್ ಮಾತನಾಡಿ, ಈ ಶಾಲೆಯ ಹಳೆಯ ವಿದ್ಯಾರ್ಥಿಗಳು ತಮಗೆ ಕಲಿಸಿದ ಶಿಕ್ಷಕರನ್ನು ಗೌರವಿಸುತ್ತಿರುವುದು ಮತ್ತು ಈ ಶಾಲೆಯ ಮೇಲೆ ಇಟ್ಟಿರುವ ಅಭಿಮಾನವನ್ನು ಕಂಡು ಸಂತಸವಾಗಿದೆ ಎಂದರು.

ಸುರೇಶ ನಾವಲಗಟ್ಟಿ, ಮಲ್ಲೇಶ ಯರಗುದ್ದಿ, ಅಧ್ಯಕ್ಷತೆ ವಹಿಸಿದ್ದ ನೇಸರಗಿ ಮಲ್ಲಾಪೂರ ಶ್ರೀ ಗಾಳೇಶ್ವರ ಮಠದ ಶ್ರೀ ಚಿದಾನಂದ ಮಹಾಸ್ವಾಮಿಗಳು ಮಾತನಾಡಿದರು. ಕಾರ್ಯಕ್ರಮದ ಯಶಸ್ವಿಯಾಗಿ ಶ್ರಮಿಸಿದ ಮಾರುತಿ ಓನವೆ, ವಿಠ್ಠಲ ಕಮತಗಿ, ಡಾ. ಬಾಬಾಸಾಹೇಬ ದೇಸಾಯಿ, ಸುರೇಶ ನಾವಲಗಟ್ಟಿ ಮತ್ತು ಉಷಾ ಕಟ್ಟಿಮನಿಯವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ನಿವೃತ್ತ ಶಿಕ್ಷಕರಾದ ಎಸ್.ಎಸ್. ಅಪ್ಪಾಜಿಗೋಳ, ಎಸ್.ಎಮ್. ವನಹಳ್ಳಿ, ಎ.ಆರ್. ಕುಲಕರ್ಣಿ, ಎ.ಬಿ. ಉಪ್ಪಾರ, ಯರಗಟ್ಟಿ, ಪ್ರಭಾಕರ ಸತ್ತಿಗೇರಿ, ಹನಮಂತ ಹಳೇಮನಿ, ಮಲ್ಲೇಶ ಹುಲಮನಿ, ಯಲ್ಲನಗೌಡ ದೊಡ್ಡಗೌಡರ, ಸುನೀಲ ಕೊಳದೂರ, ಮಹಾಂತೇಶ ಮಾಸ್ತಮರ್ಡಿ, ವಿಜಯ ಸೋಮಣ್ಣವರ, ಮಹಾಂತೇಶ ಚರಂತಿಮಠ, ಶಿವನಗೌಡ ಪಾಟೀಲ, ಮಹಾವೀರ ಚನ್ನಣ್ಣವರ, ಸೋಮಶೇಖರ ಹೊಂಡಪ್ಪನವರ, ಮಹಾಂತೇಶ ಭದ್ರಿ, ಬಸವರಾಜ ಅಮಾತಿ, ವಿದ್ಯಾರ್ಥಿನಿಯರಾದ ವೀಣಾ ಕುಲಕರ್ಣಿ, ಸುರೇಖಾ ಮೇಟಿ, ಕಮಲಾ ನಾವಲಗಟ್ಟಿ, ದ್ರಾಕ್ಷಾಯಣಿ ಮರೆಯಪ್ಪಗೋಳ, ದೊಡ್ಡವ್ವ ಪಾಟೀಲ, ಶಶಿಕಲಾ ಹಣ್ಣಿಕೇರಿ, ಸುಮಾ ಹುದ್ದಾರ, ಸುವರ್ಣ ಯತ್ತಿನಮನಿ, ಸುಮಾ ಚೋಬಾರಿ, ಉಮಾ ಪುಗಟಿ, ಮಲ್ಲವ್ವ ಚಿಗರಿ, ಶಾಂತಾ ಒಡೆಯರ, ಬಸಮ್ಮ ಮಲ್ಲಾಪೂರ ಮುಂತಾದವರಿದ್ದರು. ಸಂಜಯ ಸರಾಫ ಪ್ರಾರ್ಥಿಸಿದರು. ಎಂ.ಆರ್. ಬಾಗೇವಾಡಿ ಸ್ವಾಗತಿಸಿದರು. ಉಷಾ ಕಟ್ಟಿಮನಿ ಕಾರ್ಯಕ್ರಮ ನಿರೂಪಿಸಿದರು. ಮಹಾವೀರ ಬಿಲ್ ವಂದಿಸಿದರು.

ಹಿರಿಯ ನಿವೃತ್ತ ಶಿಕ್ಷಕ ಜಿ.ಆರ್. ಕುಲಕರ್ಣಿ ಮಾತನಾಡಿ, ಶಿಕ್ಷಕ ವೃತ್ತಿ ಅತ್ಯಂತ ಪವಿತ್ರ ವೃತ್ತಿಯಾಗಿದ್ದು, ಶಿಕ್ಷಕರಿಗೆ ಸಿಗುವಷ್ಟು ಗೌರವ ಯಾರಿಗೂ ಸಿಗುವುದಿಲ್ಲ. ಶಿಕ್ಷಕರು ಸಹ ಯಾವ ವಿದ್ಯಾರ್ಥಿಯನ್ನೂ ದಡ್ಡ ಎಂದು ಭಾವಿಸಬಾರದು. ಅಂತಹ ವಿದ್ಯಾರ್ಥಿಗಳಿಗೂ ಉತ್ತಮ ಶಿಕ್ಷಣ ನೀಡುವಲ್ಲಿ ಪ್ರಯತ್ನಿಸಬೇಕೆಂದು ಹೇಳಿದರು.

# ಗ್ಯಾಸ್ ಸಿಲಿಂಡರ್ ಸ್ಫೋಟ: 9 ಮಂದಿ ಸಾವು, ಹಲವರಿಗೆ ಗಂಭೀರ ಗಾಯ



**■ವಿಜಯಸಾಕ್ಷಿ ಸುದ್ದಿ, ಜೈಪುರ**

ರಾಜಸ್ಥಾನದ ಬಿಕಾನೆರ್ ಜಿಲ್ಲೆಯ ಅಂಗಡಿಯೊಂದರಲ್ಲಿ ಸಂಭವಿಸಿದ ಭಾರಿ ಗ್ಯಾಸ್ ಸಿಲಿಂಡರ್ ಸ್ಫೋಟದಲ್ಲಿ ಒಂಬತ್ತು ಜನರು ಸಾವನ್ನಪ್ಪಿದ್ದು, ಎಂಟು ಮಂದಿ ಗಂಭೀರವಾಗಿ ಗಾಯಗೊಂಡಿದ್ದಾರೆ.

ಬಿಕಾನೆರ್ ನಗರದ ಜನನಿಬಿಡ ಕೊಟ್ವಾಲಿ ಪೊಲೀಸ್ ಠಾಣೆ ಪ್ರದೇಶದಲ್ಲಿರುವ ಮದನ್ ಮಾರುಕಟ್ಟೆಯಲ್ಲಿ ಈ ಘಟನೆ ನಡೆದಿದೆ. ಸ್ಫೋಟದಿಂದ ಅಂಗಡಿ ಇದ್ದ ಕಟ್ಟಡ ಕುಸಿದು ಬಿದ್ದಿದೆ. ಚಿನ್ನ ಮತ್ತು ಬೆಳ್ಳಿಗೆ ಸಂಬಂಧಿಸಿದ ಕೆಲಸ ನಡೆಯುತ್ತಿದ್ದ ಅಂಗಡಿಯಲ್ಲಿ ಈ ಘಟನೆ ಸಂಭವಿಸಿದೆ.

ಇಲ್ಲಿಯವರೆಗೆ 9 ಜನರು ಸಾವನ್ನಪ್ಪಿದ್ದಾರೆ ಎಂದು ಎಎಸ್ಪಿ ವಿಶಾಲ್ ಜಂಗಿಡ್ ಮಾಹಿತಿ ನೀಡಿದ್ದಾರೆ. ಎನ್‌ಡಿಆರ್‌ಎಫ್, ಎಸ್‌ಡಿಆರ್‌ಎಫ್, ನಾಗರಿಕ ರಕ್ಷಣಾ ಮತ್ತು ಪೊಲೀಸರ ಜಂಟಿ ತಂಡ ಕಟ್ಟಡದ ಅಡಿಯಿಂದ ಐದು ಮೃತದೇಹಗಳನ್ನು ಹೊರತೆಗೆದಿದೆ. ಘಟನೆ ಕುರಿತು ತನಿಖೆ ಮುಂದುವರಿದಿದೆ.

# ನಾಳೆ ಹೇಮರಡ್ಡಿ ಮಲ್ಲಮ್ಮ ಜಯಂತಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಮಹಾಸಾಧ್ವಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತಿಯನ್ನು ಮೇ 10 ರಂದು ಬೆ 10.30 ಗಂಟೆಗೆ ನಗರದ ಕಳಸಾಪುರ ರಸ್ತೆಯಲ್ಲಿನ ಶ್ರೀ ಶಿವಾನಂದ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್ ಶಾಸಕರಾದ ಸಿ.ಸಿ.ಪಾಟೀಲ, ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಬಿ.ಅಸೂಟಿ ಆಗಮಿಸುವರು.

ಪಂಡಿತ ವೆಂಕಟೇಶ್ ಅಲ್ಕೋಡ್ ಮತ್ತು ತಂಡದವರಿಂದ ಭಕ್ತಿ ಸಂಗೀತ ಗಾಯನ ಜರುಗಲಿದೆ.

ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ ಸ್ವಾಗತ ಕೋರಿದ್ದಾರೆ.

# ಪ್ರಧಾನಿ ಮೋದಿ ಸಂಕಲ್ಪವನ್ನು ಬೆಂಬಲಿಸಿ

**■ವಿಜಯಸಾಕ್ಷಿ ಸುದ್ದಿ, ಡಂಬಳ**

ಪ್ರಧಾನಿ ಮೋದಿಯವರ ಸೂಚನೆಯ ಹಿನ್ನೆಲೆಯಲ್ಲಿ ಭಾರತದ ಸೇನೆಯು ಪಾಕಿಸ್ತಾನದ ಮೇಲೆ ದಾಳಿ ಮಾಡಿ 100ಕ್ಕೂ ಹೆಚ್ಚು ಉಗ್ರರನ್ನು ಬಲಿ ತೆಗೆದು–ಕೊಂಡಿದೆ. ಭಾರತದ ರಕ್ಷಣೆಗೆ ಹಾಗೂ ಭಾರತದ ಮಹಿಳೆಯರ ನೋವಿನ ಪ್ರತೀಕಾರವಾಗಿ ಶತ್ರುಗಳನ್ನು ನಾಶಪಡಿಸಿದ ಪ್ರಧಾನಿ ಮೋದಿ ದೃಢ ಸಂಕಲ್ಪಕ್ಕೆ ನಾವೆಲ್ಲಾ ಬೆಂಬಲವಾಗಿ ಸಹಕಾರ ನೀಡಬೇಕೆಂದು ಬಿಜೆಪಿ ಡಂಬಳ ಮಂಡಳದ ಅಧ್ಯಕ್ಷ ಅಂದಪ್ಪ ಹಾರೂಗೇರಿ ಹೇಳಿದರು.

ಡಂಬಳ ಹೋಬಳಿಯ ಮೇವುಂಡಿ ಗ್ರಾಮದಲ್ಲಿ ಬಿಜೆಪಿ ವತಿಯಿಂದ ಪಹಲ್ಗಾಮ್ ಘಟನೆಗೆ ಪ್ರತಿಯಾಗಿ ನಮ್ಮ ದೇಶದ ಸೈನಿಕರು ಆಪರೇಷನ್ ಸಿಂಧೂರ ಹೆಸರಿನಲ್ಲಿ ಉಗ್ರರ ವಿರುದ್ಧ ಯಶಸ್ವಿಯಾಗಿ ಪ್ರತೀಕಾರ ನೀಡಿದ ಹಿನ್ನೆಲೆಯಲ್ಲಿ ಆಂಜನೇಯ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ ಅವರು ಮಾತನಾಡುತ್ತಿದ್ದರು.



ಪಾಕಿಸ್ತಾನ ಪೋಷಿತ ಭಯೋತ್ಪಾದಕರನ್ನು ಸಂಪೂರ್ಣವಾಗಿ ನಾಶಪಡಿಸಬೇಕು. ಪಾಕಿಸ್ತಾನದಲ್ಲಿ ಎಲ್ಲೇ ರಕ್ಷಣೆ ಪಡೆದಿದ್ದರೂ ಬಿಡದೆ ನುಗ್ಗಿ ನಾಶಪಡಿಸಬೇಕು. ಭಯೋತ್ಪಾದಕರ ವಿರುದ್ಧ ಭಾರತವು ಗೆಲ್ಲಬೇಕು. ವಿಶ್ವದ ಎಲ್ಲಾ ದೇಶಗಳ ಇಚ್ಛೆಯೂ ಇದೇ ಆಗಿದ್ದು, ಗೆಲ್ಲುವ ವಿಶ್ವಾಸ ಎಲ್ಲರಲ್ಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮುದ್ಲಿಂಗಪ್ಪ ಕೊರ್ಲಹಳ್ಳಿ, ಚೆನ್ನಪ್ಪಗೌಡ ಕಂಬಳಿ, ಮೈಲಾರಪ್ಪ ನೋಟಗಾರ, ಚೆನ್ನವೀರಪ್ಪ ಚಿನ್ನೂರ, ಪ್ರವೀಣ ವಡ್ಡಟ್ಟಿ, ರವಿ ಕರಿಗಾರ, ಮಲ್ಲಣಗೌಡ ಸಿಂಗಟಾಲೂರ, ಅಂದಪ್ಪ ಡುಮ್ಮನವರ, ವೀರೇಂದ್ರಗೌಡ ಪಾಟೀಲ, ಹನಮಪ್ಪ ಉಪ್ಪಾರ, ಈರಪ್ಪ ಅರಕಲ್ಲ, ಗೋಪಾಲ ವಾಲಿಕಾರ, ಶ್ರೀಶೈಲಪ್ಪ ಕೊರ್ಲಹಳ್ಳಿ, ಪ್ರಭು ಕೊರ್ಲಹಳ್ಳಿ, ಶರಣಪ್ಪ ಹೂಗಾರ, ಮೈಲಾರಪ್ಪ ಜೋಶಿ, ದೇವಪ್ಪ ಕಂದಗಲ್ಲ, ಈಶಪ್ಪ ಜಂತ್ಲಿ, ಕೋಟೇಶ ಸಿಂದೋಗಿ, ರಮೇಶ ಕಮತರ ಸೇರಿದಂತೆ ಪಕ್ಷದ ಕಾರ್ಯಕರ್ತರು ಇದ್ದರು.

ಜನಗಣತಿ, ಜಾತಿ ಗಣತಿ ಚಿಂತನ-ಮಂಥನ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ವೀರಶೈವ-ಲಿಂಗಾಯತ ಎರಡೂ ಒಂದೇ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವೀರಶೈವ-ಲಿಂಗಾಯತ ಹಿಂದೂ ಧರ್ಮದ ಅವಿಭಾಜ್ಯ ಅಂಗ. ಇವೆರಡರಲ್ಲಿ ದ್ವಂದ್ವ ಹುಟ್ಟು ಹಾಕುವ ಕೆಲಸ ಯಾರೂ ಮಾಡಬಾರದು. ವೀರಶೈವ ಸೈದ್ಧಾಂತಿಕ ಪದವಾಗಿದ್ದು, ಲಿಂಗಾಯತ ರೂಢಿಯಿಂದ ಬಂದಿರುವುದಾಗಿದೆ. ಆದ್ದರಿಂದ ಜನಗಣತಿ, ಜಾತಿ ಗಣತಿ ಸಂದರ್ಭದಲ್ಲಿ ವೀರಶೈವ ಲಿಂಗಾಯತ ಎಂದು ಎಲ್ಲರೂ ಬರೆಸುವ ಅವಶ್ಯಕತೆ ಇದೆ. ಒಳಪಂಗಡದಲ್ಲಿ ಯಾವುದೇ ಜಾತಿ ಬರೆದರೂ ಅದು ವೀರಶೈವ ಲಿಂಗಾಯತ ಎಂದೇ ತಿಳಿಯಬೇಕು ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಸಮೀಪದ ಮುಕ್ತಿಮಂದಿರ ಕ್ಷೇತ್ರದಲ್ಲಿ ಜರುಗಿದ ಶ್ರೀ ಜಗದ್ಗುರು ಪಂಚಾಚಾರ್ಯರ ಸಮಾವೇಶ ಹಾಗೂ ಜನಗಣತಿ, ಜಾತಿ ಗಣತಿ ಚಿಂತನ-ಮಂಥನ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ನಮಗೆ ನೆರಳು ಕೊಡುವ ಮರವನ್ನೇ ಕತ್ತರಿಸುವ, ನಿಂತ ನೆಲವನ್ನು ಬಗೆಯುವ ಕೆಲಸ ಕೆಲವರಿಂದ ನಡೆಯುತ್ತಿದೆ.

ಇದನ್ನು ತಡೆಗಟ್ಟುವ ನಿಟ್ಟಿನಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ರಾಷ್ಟ್ರೀಯ ಅಧ್ಯಕ್ಷರಾದ ಡಾ. ಶಾಮನೂರ ಶಿವಶಂಕರಪ್ಪ, ರಾಜ್ಯಾಧ್ಯಕ್ಷ ಶಂಕರ್ ಬಿದರಿ ಪ್ರಾಮಾಣಿಕ ಪ್ರಯತ್ನವನ್ನು ಮಾಡುತ್ತಿದ್ದಾರೆ.

ಮುಂಬರುವ ಜಾತಿ ಜನಗಣತಿಯಲ್ಲಿ ವೀರಶೈವ ಲಿಂಗಾಯತ ಸಮಾಜದ ಎಲ್ಲ ಒಳಪಂಗಡಗಳು ಮಹಾಸಭೆಯ ನಿರ್ಧಾರದಂತೆ ವೀರಶೈವ ಲಿಂಗಾಯತ ಎಂದೇ ಬರೆಯುವುದು ಸೂಕ್ತ ಎಂದರು.

ಸಾನ್ನಿಧ್ಯ ವಹಿಸಿದ ಶ್ರೀಮದ್ ಕಾಶಿ ಜಗದ್ಗುರು ಡಾ. ಚಂದ್ರಶೇಖರ ಶಿವಾಚಾರ್ಯ ಭಗವತ್ಪಾದರು ಮಾತನಾಡಿ, ಶ್ರೀ ರಂಭಾಪುರಿ ಜಗದ್ಗುರುಗಳ ಪ್ರಯತ್ನದಿಂದಾಗಿ ಇಂದು ನಾವೆಲ್ಲರೂ ಮುಕ್ತಿಮಂದಿರ ಕ್ಷೇತ್ರದಲ್ಲಿ ಸೇರಿದ್ದೇವೆ. ಪರಸ್ಪರ ಸಮಾಲೋಚಿಸಿ ಧರ್ಮದ ಕಾಲಂನಲ್ಲಿ ಹಿಂದೂ ಮತ್ತು ಪಂಗಡದಲ್ಲಿ ವೀರಶೈವ ಲಿಂಗಾಯತ ಎಂದೇ ಬರೆಸಬೇಕು. ಒಳಜಾತಿಯಲ್ಲಿ ಅವರವರ ಉಪಜಾತಿ ಬಳಸಬಹುದು. ಈ ವಿಚಾರವನ್ನು ಮಹಾಸಭೆ ಎಲ್ಲರಿಗೂ ಮನವರಿಕೆಯಾಗುವಂತೆ ಪ್ರಚಾರ ಪಡಿಸುವುದು ಮುಖ್ಯವಾಗಿದೆ ಎಂದರು.

ಶ್ರೀ ಉಜ್ಜಯಿನಿ ಜಗದ್ಗುರು ಸಿದ್ಧಲಿಂಗ ಶಿವಾಚಾರ್ಯ ಭಗವತ್ಪಾದರು, ಶ್ರೀಶೈಲ ಜಗದ್ಗುರು ಡಾ. ಚನ್ನಸಿದ್ಧರಾಮ ಪಂಡಿತಾರಾಧ್ಯ ಭಗವತ್ಪಾದರು, ಕಾಶೀ ಜಗದ್ಗುರು ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಭಗವತ್ಪಾದರು ಸಾನ್ನಿಧ್ಯ ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ರಾಜ್ಯಾಧ್ಯಕ್ಷ ಶಂಕರ ಬಿದರಿ ಮಾತನಾಡಿ, ಬಹು ಸಂಖ್ಯಾತರಾದ ವೀರಶೈವ ಲಿಂಗಾಯತ ಸಮುದಾಯ ಬಹಳಷ್ಟು ಸಂಕಷ್ಟದಲ್ಲಿದೆ. ಎಲ್ಲ ಒಳಪಂಗಡಗಳ ಜನರು ಆಂತರಿಕ ಭಿನ್ನಾಭಿಪ್ರಾಯಗಳನ್ನು ಮರೆತು ನಮ್ಮ ಮೂಲ ಧರ್ಮವನ್ನು ಬೆಳೆಸುವ ಅವಶ್ಯಕತೆ ಇದೆ. ಈಗಿನ ಸರಕಾರ ಕೂಡ ಮತ್ತಷ್ಟು ಈ ಸಮಾಜವನ್ನು ಒಡೆಯುವ ಕೆಲಸಕ್ಕೆ ಮುಂದಾಗಿರುವುದನ್ನು ನಾವೆಲ್ಲರೂ ಖಂಡಿಸುತ್ತೇವೆ ಎಂದರು.

ಹಿರಿಯ ನ್ಯಾಯವಾದಿಗಳಾದ ಗಂಗಾಧರ್ ಗುರುಮಠ ಮಾತನಾಡಿ, ವೀರಶೈವ ಲಿಂಗಾಯತ ಸಮುದಾಯ ಈಗಲಾದರೂ ಎಚ್ಚೆತ್ತುಕೊಳ್ಳದೆ ಇದ್ದರೆ ಮುಂದಿನ ದಿನಗಳಲ್ಲಿ ಬಹಳಷ್ಟು ಸಂಕಷ್ಟಗಳನ್ನು ಅನುಭವಿಸಬೇಕಾಗುತ್ತದೆ.

ಆದ್ದರಿಂದ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆ ಶ್ರೀ ಜಗದ್ಗುರು ಪಂಚಪೀಠಾಧೀಶ್ವರರನ್ನು ಎಲ್ಲ ಮಠಾಧೀಶರನ್ನು ಒಂದೆಡೆ ಸೇರಿಸಿ ಜಾಗೃತಿ ಮಾಡುವ ಅವಶ್ಯಕತೆ ಇದೆ ಎಂದರು.

ಸಮಾರಂಭದಲ್ಲಿ ಶಿರಹಟ್ಟಿ ಕ್ಷೇತ್ರದ ಶಾಸಕ ಡಾ.ಚಂದ್ರು ಲಮಾಣಿ, ಮಾಜಿ ಸಂಸದ ಮಂಜುನಾಥ ಕುನ್ನೂರ, ಮಾಜಿ ಶಾಸಕರಾದ ಜಿ.ಎಸ್. ಗಡ್ಡದ್ದೇವರಮಠ, ಗಂಗಣ್ಣ ಮಹಾಂತ ಶೆಟ್ಟರ್, ಮಹಾಸಭೆ ಉಪಾಧ್ಯಕ್ಷ ಅಣಬೇರು ರಾಜಣ್ಣ, ದಾವಣಗೆರೆ ಜಿಲ್ಲಾ ಘಟಕದ ಗೌರವ ಅಧ್ಯಕ್ಷ ಉಳವಯ್ಯ, ಅಕ್ಕಿ ರಾಜು, ವಿನಾಯಕ ಬಸ್ ಮಾಲೀಕ ಹರೀಶ್, ವಾಗೀಶ್ ಸ್ವಾಮಿ, ಚಂಬಣ್ಣ ಬಾಳಿಕಾಯಿ, ಆನಂದ ಮೆಕ್ಕಿ, ಪ್ರಶಾಂತ್, ವೀರೇಶ್ ಮುಂತಾದವರಿದ್ದರು.

ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು ಸ್ವಾಗತಿಸಿದರು. ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಸಂಕಲ್ಪ ನುಡಿ ನುಡಿದರು. ಹುಕ್ಕೇರಿ ಹಿರೇಮಠದ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳು ನಿರೂಪಿಸಿದರು.



ಮುಖ್ಯ ಅತಿಥಿಗಳಾಗಿ ಪಾಲ್ಗೊಂಡ ಗಣಿ ಮತ್ತು ಭೂ ವಿಜ್ಞಾನ ಖಾತೆ ಹಾಗೂ ತೋಟಗಾರಿಕೆ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಮಾತನಾಡಿ, ಮುಂಬರುವ ಜೂನ್ ತಿಂಗಳಲ್ಲಿ ದಾವಣಗೆರೆ ಮಹಾನಗರದಲ್ಲಿ ಮತ್ತೊಮ್ಮೆ ಪಂಚಪೀಠಾಧೀಶ್ವರರನ್ನು ಬರಮಾಡಿಕೊಂಡು ಬೃಹತ್ ಸಮಾರಂಭ ಆಯೋಜಿಸುವ ಉದ್ದೇಶವನ್ನು ಹೊಂದಿದ್ದೇವೆ. ವೀರಶೈವ ಲಿಂಗಾಯಿತ ಸಮುದಾಯದ ಎಲ್ಲ ರಾಜಕೀಯ ನಾಯಕರು ಒಗ್ಗಟ್ಟಾಗಿ ಸರ್ಕಾರಕ್ಕೆ ಎಲ್ಲ ಒಳಪಂಗಡಗಳು ವೀರಶೈವ ಲಿಂಗಾಯತ ಸಮಾಜಕ್ಕೆ ಸಂಬಂಧಪಟ್ಟಿವೆ ಎಂದು ಮನವರಿಕೆ ಮಾಡಿಕೊಡಲಾಗುವುದೆಂದರು.

'ದುಡಿಯೋಣ ಬಾ' ಅಭಿಯಾನದ ಅಂಗವಾಗಿ ನಡೆದ ಸಭೆಯಲ್ಲಿ ಇಓ ವಿಶ್ವನಾಥ ಹೊಸಮನಿ

# ಆರ್ಥಿಕ ಸದೃಢತೆಗೆ ನರೇಗಾ ಸಹಕಾರಿ

■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ನರೇಗಾ ಕೂಲಿ ಮೊತ್ತ 370 ರೂ.ಗಳಿಗೆ ಹೆಚ್ಚಳವಾಗಿದ್ದು, ಗ್ರಾಮೀಣ ಭಾಗದ ಅಕುಶಲ ಕೂಲಿ ಕಾರ್ಮಿಕರು ಆರ್ಥಿಕವಾಗಿ ಸದೃಢರಾಗಲು ಕಾರಣವಾಗಿದೆ ಎಂದು ತಾ.ಪಂ ಇಓ ವಿಶ್ವನಾಥ ಹೊಸಮನಿ ಹೇಳಿದರು.

ತಾಲೂಕಿನ ಡೋಣಿ ಗ್ರಾ.ಪಂ ಕಚೇರಿಯಲ್ಲಿ 'ದುಡಿಯೋಣ ಬಾ' ಅಭಿಯಾನದ ಅಂಗವಾಗಿ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬೇಸಿಗೆಯಲ್ಲಿ ಕೆಲಸದ ಕೊರತೆ ಗ್ರಾಮೀಣ ಭಾಗದ ಜನರನ್ನು ಭಾದಿಸುತ್ತಿರುತ್ತದೆ. ಆ ಕೊರತೆ ನೀಗಿಸಲು ನರೇಗಾ ಯೋಜನೆಯನ್ನು ಜನರು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ನರೇಗಾ ಕಾಮಗಾರಿಗಳಲ್ಲಿ ಎನ್‌ಎಂಎಂಎಸ್ ಆ್ಯಪ್ ಮೂಲಕ ಎರಡು ಬಾರಿ ಹಾಜರಾತಿ ಕಡ್ಡಾಯವಾಗಿದ್ದು, ಈ ವಿಧಾನದಿಂದ ಮಾತ್ರ ಕೂಲಿಕಾರರಿಗೆ ಕೂಲಿ ಮೊತ್ತ ನೇರವಾಗಿ ಬ್ಯಾಂಕ್ ಖಾತೆಗೆ ಜಮೆಯಾಗಲಿದೆ. ನಿರುದ್ಯೋಗ ಹಾಗೂ ಆರ್ಥಿಕ ಸಂಕೋಲೆಯಿಂದ ತತ್ತರಿಸುವ ಬಡವರಿಗೆ ಈ ಅಭಿಯಾನ ಸಹಕಾರಿ ಎಂದರು.

ಪ್ರತಿ ಕುಟುಂಬಕ್ಕೆ 100 ದಿನಗಳ ಉದ್ಯೋಗ ಪಡೆಯಲು ಅವಕಾಶವಿದ್ದು, ಅಷ್ಟು ದಿನ ಕೂಲಿಕಾರರಾಗಿ ಭಾಗವಹಿಸಿ ಯೋಜನೆಯ ಸಂಪೂರ್ಣ ಲಾಭ ಪಡೆದರೆ 37000 ರೂಪಾಯಿ ರೈತರ ಖಾತೆಗೆ ನೇರವಾಗಿ ಜಮೆಯಾಗಲಿದೆ.

ಗ್ರಾಮೀಣ ಭಾಗದ ರೈತರು ತಮ್ಮ ಜಮೀನುಗಳಲ್ಲಿ ಕೃಷಿ ಹೊಂಡ, ಬದು ಮುಂತಾದ ಕೃಷಿ ಚಟುವಟಿಕೆ ಜೊತೆಗೆ ಕೆರೆ ಹೂಳೆತ್ತುವುದು, ಜಲಮೂಲಗಳ ದಡದಲ್ಲಿ ಅರಣ್ಯೀಕರಣ, ನೆಡುತೋಪು ನಿರ್ಮಾಣ, ಕಾಲುವೆಗಳ ಪುನಶ್ಚೇತನ ಮುಂತಾದ ಕಾರ್ಯಗಳಿಗೆ ಅವಕಾಶವಿದೆ. ಹಾಗಾಗಿ ಯೋಜನೆಯ ಸಮರ್ಪಕ ಅನುಷ್ಠಾನಕ್ಕಾಗಿ ಅಭಿಯಾನವನ್ನು ಯಶಗೊಳಿಸಲು ಎಲ್ಲರೂ ಕಾರ್ಯೋನ್ಮುಖರಾಗಬೇಕು ಎಂದು ಸೂಚಿಸಿದರು.

ಈ ವೇಳೆ ಸಹಾಯಕ ಕೃಷಿ ಅಧಿಕಾರಿ ಎಸ್.ಬಿ. ರಾಮೇನಹಳ್ಳಿ, ಪಿಡಿಓ ಪಾರ್ವತಿ ಹೊಂಬಳ, ಗ್ರಾ.ಪಂ ಸದಸ್ಯರು, ಬಿಎಫ್‌ಟಿ, ಜಿಕೆಎಂ, ಕಾಯಕ ಬಂಧುಗಳು ಹಾಗೂ ಸಾರ್ವಜನಿಕರು ಇದ್ದರು.



ಜಾಬ್ ಕಾರ್ಡ್ ಇಲ್ಲದ ದುರ್ಬಲ ವರ್ಗದವರಿಂದ ಅಗತ್ಯ ದಾಖಲೆ ಪಡೆದು ಉದ್ಯೋಗ ಚೀಟಿ ನೀಡುವುದು, ಕೆಲಸದ ಬೇಡಿಕೆ ಪಡೆಯುವ ಕಾರ್ಯವನ್ನು ತಾಲೂಕಿನ ಸಂಬಂಧಿಸಿದ ನರೇಗಾ ಸಿಬ್ಬಂದಿಗಳಿಗೆ ಈಗಾಗಲೇ ತಿಳಿಸಲಾಗಿದೆ ಎಂದು ವಿಶ್ವನಾಥ ಹೊಸಮನಿ ಮಾಹಿತಿ ನೀಡಿದರು.

# ವೀರೇಶ್ವರ ಪುಣ್ಯಾಶ್ರಮದಲ್ಲಿ ವಿಶೇಷ ಪೂಜೆ




■ವಿಜಯಸಾಕ್ಷಿ ಸುದ್ದಿ, ಗದಗ

ಜಮ್ಮು-ಕಾಶ್ಮೀರದಲ್ಲಿ ಅಮಾಯಕ ಪ್ರವಾಸಿಗರ ಮೇಲೆ ಗುಂಡಿನ ದಾಳಿ ಮಾಡಿ 30 ಜನರ ಕಗ್ಗೊಲೆ ಮಾಡಿದ ಪಾಕಿಸ್ತಾನ ಬೆಂಬಲಿತ ಉಗ್ರರ ವಿರುದ್ಧ ಭಾರತೀಯ ಸೇನೆ ಯುದ್ಧ ಸಾರಿದ್ದು, ಈ ಯುದ್ಧದಲ್ಲಿ ಭಾರತೀಯ ಸೇನೆ ಜಯಶಾಲಿಯಾಗಲೆಂದು ಪ್ರಾರ್ಥಿಸಿ ಗುರುವಾರ ನಗರದ ವೀರೇಶ್ವರ ಪುಣ್ಯಾಶ್ರಮದ ಡಾ. ಪಂಡಿತ ಪುಟ್ಟರಾಜ ಕವಿಗಳ ಆಶ್ರಮದಲ್ಲಿ ಸರಾಫ ಅಸೋಸಿಯೇಶನ್ ವತಿಯಿಂದ ವಿಶೇಷ ಪೂಜೆ ಜರುಗಿತು.

ಈ ಕಾರ್ಯಕ್ರಮದಲ್ಲಿ ಸರಾಫ ಅಸೋಸಿಯೇಶನ್ ಅಧ್ಯಕ್ಷ ಸಿದ್ದಲಿಂಗೇಶ ದೇವೆಂದ್ರಪ್ಪ ಮೂರಶಿಳ್ಳಿನ, ಉಪಾಧ್ಯಕ್ಷ ನಾಗರಾಜ ಆರ್.ಮೇರವಾಡೆ, ಕಿರಣ ಭಾಂಡಗೆ, ಶ್ರೀನಿವಾಸ ಭಾಂಡಗೆ, ಸಿದ್ಧಾರ್ಥ ಸಿದ್ಲಿಂಗ್, ಖಜಾಂಚಿ ಮೋಹನ ಪವಾರ, ಕಾರ್ಯದರ್ಶಿ ಸಂಜಯ ರಾಯ್ಕರ, ಉಪಾಧ್ಯಕ್ಷರಾದ ಪರಶುರಾಮ ಖಟವಟೆ, ಶ್ರೀನಿವಾಸ ಬದಿ, ಪ್ರಮೋದ ಶಿದ್ಲಿಂಗ, ಸೋಹಣ ಕಾಟಗರ, ವಿನಾಯಕ ಮೇರವಾಡೆ, ಕರ್ನಾಟಕ ರಕ್ಷಣಾ ವೇದಿಕೆ ಗದಗ ಜಿಲ್ಲಾಧ್ಯಕ್ಷ ವೆಂಕಟೇಶ ಬೇಲೂರ, ಬ್ಯಾಂಕ್ ಅಧಿಕಾರಿ ಶರಣಪ್ಪ ಗುರಮಣ್ಣವರ, ಶರಣ ಬಸವೇಶ್ವರ ಬ್ಯಾಂಕ್ ಅಧ್ಯಕ್ಷರು ಪಾಲ್ಗೊಂಡಿದ್ದರು.

# ಇಡೀ ಜಗತ್ತು ನಮ್ಮತ್ತ ತಿರುಗಿ ನೋಡುತ್ತಿದೆ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ



ಮನುಷ್ಯತ್ವವಿಲ್ಲದ ಉಗ್ರರನ್ನು ಸದೆಬಡಿಯುವಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿಯವರ ನಡೆ ಹಾಗೂ ಭಾರತೀಯ ಸೇನೆ ಕಾರ್ಯಾಚರಣೆ ಹೆಮ್ಮೆ ಪಡುವಂತಿದ್ದು, ಅವರೆಲ್ಲರೂ ಅಭಿನಂದನಾರ್ಹರು ಎಂದು ಸಭಾಪತಿ ಬಸವರಾಜ ಹೊರಟ್ಟಿಯವರು ಹೇಳಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, 'ಆಪರೇಷನ್ ಸಿಂದೂರ' ಹೆಸರಿನಲ್ಲಿ ನಮ್ಮ ದೇಶದ ಸೈನಿಕರು ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿರುವ ಉಗ್ರಗಾಮಿಗಳ ನೆಲೆಗಳನ್ನು ಧ್ವಂಸಗೊಳಿಸಿ ಭಾರತದ ಅಗಾಧ ಶಕ್ತಿಯನ್ನು ಜಗತ್ತಿಗೆ ತೋರಿಸುವ ಮೂಲಕ ಭಾರತೀಯರನ್ನು ಕೆಣಕಿದರೆ ಇದೇ ಪ್ರತ್ಯುತ್ತರ ಎಂಬ ಸಂದೇಶವನ್ನು ಕಳಿಸಿದ್ದಾರೆ.

ಭಾರತೀಯ ಸೇನಾಪಡೆಗಳ ಬಗ್ಗೆ ನಮಗೆ ಹೆಮ್ಮೆಯಾಗುತ್ತಿದೆ. ಅಲ್ಲದೇ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಕೂಡಾ ತಮ್ಮ ಚಾಣಾಕ್ಷ ನಡೆಯ ಮೂಲಕ ದೇಶದ ಸಂರಕ್ಷಣೆಯ ವಿಷಯದಲ್ಲಿ ಯಾವುದಕ್ಕೂ ರಾಜಿಯಾಗದೆ ಜಗತ್ತಿನ ಎಲ್ಲ ದೇಶಗಳ ಪ್ರೀತಿ-ವಿಶ್ವಾಸವನ್ನು ಗಳಿಸಿಕೊಳ್ಳುವುದರ ಮೂಲಕ ರಾಜತಾಂತ್ರಿಕ ಹೆಜ್ಜೆಗಳನ್ನು ಇಡುತ್ತಿರುವುದು ಶ್ಲಾಘನೀಯ.

ದೇಶದ ವಿಷಯ ಬಂದಾಗ ಭಾರತೀಯರೆಲ್ಲರೂ ಪಕ್ಷಭೇದ ಮರೆತು ಒಂದೇ ಆದದ್ದು ಇಡೀ ಜಗತ್ತು ನಮ್ಮತ್ತ ತಿರುಗಿ ನೋಡುವಂತಾಗಿದೆ. ಇದು ಕೂಡ ಅಭಿಮಾನದ ಸಂಗತಿ. ಪಲ್ಗಾಮ್‌ನಲ್ಲಿ ಅಮಾಯಕ ಭಾರತೀಯರ ಮೇಲೆ ದಾಳಿ ಮಾಡಿದ್ದ ಪಾಕ್ ಪೋಷಿತ ಉಗ್ರರು ಇನ್ನೆಂದೂ ಭಾರತದತ್ತ ತಿರುಗಿ ನೋಡದಂತೆ ಮಾಡಿದ ಪ್ರಧಾನಮಂತ್ರಿಗಳು ಹಾಗೂ ಅವರ ತಂಡಕ್ಕೆ ಮತ್ತು ಎಲ್ಲ ಸೇನಾಪಡೆಗಳಿಗೆ ವಿಶೇಷ ಅಭಿನಂದನೆಗಳನ್ನು ಸಲ್ಲಿಸುವುದಾಗಿ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದ್ದಾರೆ.



ಗದಗ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಗದಗ ತಾಲೂಕು ಅಧಿಕಾರಿ ಡಾ. ಬಸವರಾಜ ಬಳ್ಳಾರಿ ಅವರು ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘದ ಗದಗ ಜಿಲ್ಲಾ ಅಧ್ಯಕ್ಷರಾಗಿ ಆಯ್ಕೆಯಾದ ತರುವಾಯ ಪ್ರಥಮ ಬಾರಿಗೆ ರಾಜ್ಯ ಸರಕಾರಿ ನೌಕರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಕ್ಷರಿ ಅವರನ್ನು ಭೇಟಿ ಮಾಡಿ, ಸರಕಾರಿ ನೌಕರರ ಸಂಘಟನೆ ಕುರಿತು ಚರ್ಚಿಸಿ, ಅಗತ್ಯ ಮಾರ್ಗದರ್ಶನ ಕೋರಿದರು.

# ಭಾರತೀಯ ಯೋಧರಿಗೆ ತೋಂಟದ ಶ್ರೀ ಅಭಿನಂದನೆ

■ವಿಜಯಸಾಕ್ಷಿ ಸುದ್ದಿ, ಗದಗ



ಇತ್ತೀಚೆಗೆ ಕಾಶ್ಮೀರದ ಪಹಲ್ಗಾಮ್‌ದಲ್ಲಿ ಪ್ರವಾಸಿಗರ ಮೇಲೆ ನಡೆದ ಉಗ್ರವಾದಿಗಳ ದಾಳಿಗೆ ಪ್ರತೀಕಾರವಾಗಿ ಭಾರತೀಯ ಯೋಧರು ಉಗ್ರರ 9 ನೆಲೆಗಳ ಮೇಲೆ ದಾಳಿ ನಡೆಸಿ ಉಗ್ರರ ಸದ್ದಡಗಿಸಿರುವುದು ಅಭಿನಂದನೀಯ ಸಂಗತಿ. ಭಾರತವು ಶಾಂತಿಪ್ರಿಯ ದೇಶವಾಗಿದ್ದರೂ ಈ ದೇಶದ ಶಾಂತಿ ಮತ್ತು ಸುವ್ಯವಸ್ಥೆಯನ್ನು ಕದಡುವ ಉಗ್ರರ ಹೀನ ಕೃತ್ಯಕ್ಕೆ ಪ್ರತಿಯಾಗಿ ಭಾರತೀಯ ಸೇನೆ ಆಪರೇಷನ್ ಸಿಂಧೂರ ಮೂಲಕ ಉಗ್ರರ ನೆಲೆಗಳನ್ನು ಪತ್ತೆ ಹಚ್ಚಿ ದಾಳಿ ನಡೆಸಿ ತಕ್ಕ ಉತ್ತರ ನೀಡಿದ್ದಾರೆ ಎಂದು ಡಂಬಳ-ಗದಗ ಜಗದ್ಗುರು ತೋಂಟದಾರ್ಯ ಸಂಸ್ಥಾನಮಠದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಅಭಿನಂದಿಸಿದ್ದಾರೆ.

ಸಮಸ್ತ ಭಾರತೀಯರು ಜಾತಿ, ಧರ್ಮ, ಪಕ್ಷ ಮತ್ತು ಪ್ರದೇಶಗಳ ಭೇದ ಮರೆತು ಭಾರತೀಯ ಸೇನೆಗೆ ಬೆಂಬಲ ವ್ಯಕ್ತಪಡಿಸಿರುವುದು ಈ ದೇಶದ ಐಕ್ಯತೆ ಹಾಗೂ ಸಮಗ್ರತೆಗೆ ಸಾಕ್ಷಿಯಾಗಿದೆ. ಇದು ನಮ್ಮ ಯೋಧರ ಬಲವನ್ನು ಹೆಚ್ಚಿಸಿದೆ ಎಂದು ತಿಳಿಸಿ, ಭಾರತೀಯ ಸೇನೆಯ ಯೋಧರನ್ನು ಹೃತ್ಪೂರ್ವಕವಾಗಿ ಅಭಿನಂದಿಸಿದ್ದಾರೆ.

# ಭಾರತೀಯರ ಪರಾಕ್ರಮದ ಸಂಕೇತ

■ವಿಜಯಸಾಕ್ಷಿ ಸುದ್ದಿ, ಗದಗ



ಆತಂಕವಾದಿಗಳು ಪುಲ್ವಾಮಾದಲ್ಲಿ ನಮ್ಮ ಸೈನಿಕರನ್ನು ಹತ್ಯೆ ಮಾಡಿದಾಗ ಅದಕ್ಕೆ ಪ್ರತ್ಯುತ್ತರವಾಗಿ ಬಾಲಾಕೋಟ್ ದಾಳಿ ನಡೆಸಿದ್ದ ಕೇಂದ್ರ ಸರ್ಕಾರ ಈಗ ಪಹಲ್ಗಾಮ್ ನರಮೇಧಕ್ಕೆ ಉತ್ತರವಾಗಿ ಆಪರೇಶನ್ ಸಿಂಧೂರ ಕೈಕೊಂಡಿದ್ದು, ಇದು ಭಾರತೀಯರ ಪರಾಕ್ರಮದ ಸಂಕೇತವಾಗಿದೆ ಎಂದು ಬಿಜೆಪಿ ಮುಖಂಡರು ಹಾಗೂ ಉಸಿರು ಫೌಂಡೇಶನ್ ಅಧ್ಯಕ್ಷರಾದ ಶರಣ್ ಪಾಟೀಲ ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಪ್ರಧಾನಿ ಮೋದಿಯವರ ದೇಶಪ್ರೇಮ ಎಂಥದ್ದು ಎನ್ನುವುದಕ್ಕೆ ಈ ದಾಳಿ ಸಾಕ್ಷಿಯಾಗಿದ್ದು, ಉಗ್ರರನ್ನು ಸಾಕುತ್ತಾ ಬಂದಿದ್ದ ಪಾಕಿಸ್ತಾನ ಈ ದಾಳಿಯಿಂದ ಬೆಚ್ಚಿಬಿದ್ದಿದೆ. ಭಯೋತ್ಪಾದಕರ ನೆಲೆಗಳೆಲ್ಲ ಕ್ಷಿಪಣಿ ದಾಳಿಯಿಂದ ನಾಶವಾಗಿದ್ದು, ಮುಂದಿನ ದಿನಗಳಲ್ಲಿ ಕೇಂದ್ರ ಸರ್ಕಾರ ಭಾರತಕ್ಕೆ ಆಪತ್ತು ತಂದೊಡ್ಡಬಲ್ಲ ಎಲ್ಲಾ ಉಗ್ರ ಸಂಘಟನೆಗಳನ್ನು ಸಂಪೂರ್ಣವಾಗಿ ನಾಶ ಮಾಡಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಪಹಲ್ಗಾಮ್‌ನಲ್ಲಿ ಭಾರತೀಯರನ್ನು ಕೊಂದು ಹಾಕಿದರೂ, ಕಾಂಗ್ರೆಸ್‌ನವರು ಶಾಂತಿ ಜಪ ಮಾಡಬೇಕೆಂದು ಹೇಳುತ್ತಿದ್ದು, ಇಂಥ ದೇಶದ್ರೋಹಿ ಮನಸ್ಥಿತಿಯ ಕಾಂಗ್ರೆಸ್ಸಿಗರಿಗೆ ಈ ದಾಳಿಯನ್ನು ಸಂಭ್ರಮಿಸುವ ಯಾವುದೇ ನೈತಿಕತೆ ಇಲ್ಲ ಎಂದಿರುವ ಅವರು, ಭಾರತವನ್ನು ಯಾರೇ ಕೆಣಕಿದರೂ ಅವರಿಗೆ ತಕ್ಕ ಉತ್ತರ ನೀಡಲು ಮೋದಿ ಸರ್ಕಾರ ಸದಾ ಸಿದ್ಧವಾಗಿದೆ ಎಂದಿದ್ದಾರೆ.

# ತುಟ್ಟಿ ಭತ್ಯೆ ಹೆಚ್ಚಳಕ್ಕೆ ಸರ್ಕಾರಿ ನೌಕರರ ಸಂಘ ಹರ್ಷ

■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ರಾಜ್ಯ ಸರ್ಕಾರವು ಸರ್ಕಾರಿ ನೌಕರರ ತುಟ್ಟಿ ಭತ್ಯೆಯನ್ನು ಜನವರಿ 1, 2025ರಿಂದ ಅನ್ವಯವಾಗುವಂತೆ ಮೂಲ ವೇತನದ ಶೇ. 10.75ರಿಂದ ಶೇ.12.25ಕ್ಕೆ ಹೆಚ್ಚಳ ಮಾಡಿ ಆದೇಶ ಹೊರಡಿಸಿದ್ದು, ಸರ್ಕಾರಿ ನೌಕರರ ಸಂಘದ ಮುಂಡರಗಿ ತಾಲೂಕು ಶಾಖೆಯು ಹರ್ಷ ವಕ್ತಪಡಿಸಿದೆ.

ಸಕಾಲದಲ್ಲಿ ತುಟ್ಟಿ ಭತ್ಯೆಯನ್ನು ಬಿಡುಗಡೆಗೊಳಿಸಿ, ಸಮಸ್ತ ನೌಕರರ ಹಿತವನ್ನು ರಕ್ಷಿಸಿದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರಿಗೆ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರರಿಗೆ, ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಕ್ಷರಿಯವರಿಗೆ ಮತ್ತು ಸರ್ಕಾರದ ಆರ್ಥಿಕ ಇಲಾಖೆಯ ಎಲ್ಲಾ ಉನ್ನತ ಮಟ್ಟದ ಅಧಿಕಾರಿಗಳಿಗೆ ಮುಂಡರಗಿ ತಾಲೂಕು ಅಧ್ಯಕ್ಷ ನಾಗರಾಜ ಹಳ್ಳಿಕೇರಿ, ಕಾರ್ಯದರ್ಶಿ ಶಂಕರ ಸರ್ವದೆ ಅಭಿನಂದಿಸಿದ್ದಾರೆ.

# ನವೋದ್ಯಮಗಳಿಂದ ರೈತನ ಸಮಸ್ಯೆಗಳಿಗೆ ಪರಿಹಾರ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕೃಷಿ ವಿಶ್ವವಿದ್ಯಾಲಯದಲ್ಲಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಯೋಜನೆ ಅಡಿಯಲ್ಲಿ 11ನೇ ಹಂತದ ಕೃಷಿ ಉದ್ಯಮಶೀಲತೆ ಮಾರ್ಗದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಉದ್ಘಾಟಕರಾಗಿ ಆಗಮಿಸಿದ್ದ ಧಾರವಾಡ ಕೃಷಿ ವಿಶ್ವವಿದ್ಯಾಲಯದ ಕುಲಪತಿ ಡಾ. ಪಿ.ಎಲ್. ಪಾಟೀಲ ಮಾತನಾಡಿ, ಕೃಷಿಯಲ್ಲಿ ಹಲವಾರು ಸವಾಲುಗಳಿದ್ದು, ಕೃಷಿ ನವೋದ್ಯಮಗಳಿಗೆ ಹೆಚ್ಚಿನ ಅವಕಾಶ ಇದೆ.

ಕೃಷಿ ಕ್ಷೇತ್ರದಲ್ಲಿ ತೀವ್ರಗತಿಯಲ್ಲಿ ಬದಲಾವಣೆ ಆಗುತ್ತಿದ್ದು, ಹೊಸ ತಂತ್ರಜ್ಞಾನಕ್ಕೆ ಬೇಡಿಕೆ ಇದೆ, ಇದು ಕೃಷಿ ಸ್ಟಾರ್ಟ್‌ಅಪ್‌ಗಳಿಂದ ಪೂರೈಸಲು ಸಾಧ್ಯವೆಂದು ತಿಳಿಸಿದರು.

ಮೇ 5ರಿಂದ ಪ್ರಾರಂಭವಾದ ಒಂದು ವಾರದ ತರಬೇತಿಗಾಗಿ 34 ನೂತನ ಕೃಷಿ ನವೋದ್ಯಮಿಗಳನ್ನು ಆಯ್ಕೆ ಮಾಡಲಾಗಿದ್ದು, ಯೋಜನೆ ಅಡಿಯಲ್ಲಿ ನಾವೀನ್ಯತೆ ಇರುವ ಸ್ಟಾರ್ಟ್‌ಅಪ್‌ಗಳಿಗೆ ಆರ್ಥಿಕ ಹಾಗೂ ತಾಂತ್ರಿಕ ನೆರವು ನೀಡಲಾಗುತ್ತದೆ.

ಕೃಷಿಕ್-ನವೋದ್ಯಮ ಪೋಷಣ ಕೇಂದ್ರದ ಪ್ರಧಾನ ಸಂಶೋಧಕರು ಹಾಗೂ ಕಾರ್ಯನಿರ್ವಹಣಾ ಅಧಿಕಾರಿಗಳಾದ ಡಾ. ಎಸ್.ಎಸ್. ಡೊಳ್ಳಿ ಸ್ವಾಗತಿಸಿ, ಕಾರ್ಯಕ್ರಮದ ಬಗ್ಗೆ ಪ್ರಸ್ತಾಪಿಸಿ, ಈವರೆಗೆ 92 ಸ್ಟಾರ್ಟ್‌ಅಪ್‌ಗಳಿಗೆ ತಾಂತ್ರಿಕ ಹಾಗೂ ಹಣಕಾಸಿನ ನೆರವು ನೀಡಲಾಗಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಕೃಷಿಕ ನವೋದ್ಯಮ ಪೋಷಣಾ ಕೇಂದ್ರದ ಸಿಬ್ಬಂದಿ ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka